# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..


ಕನ್ನಡ ವಾರಪತ್ರಿಕೆ

**ಸುಭಾಷಿತ:**

ಕಷ್ಟ ಬಂತೆಂದು ಅತ್ತರೆ ನಾಟಕ ಎನ್ನುವರು
ಸುಖದಲ್ಲಿದ್ದೇನೆಂದು ನಕ್ಕರೆ ಹುಚ್ಚ ಎನ್ನುವರು
ಗೌರವಕ್ಕಾಗಿ ಮೌನವಾದರೆ ತಪ್ಪಿತಸ್ಥ ಎನ್ನುವರು
ಪರರಿಗೆ ನೆರವಾದರೆ ಅಧಿಕಪ್ರಸಂಗಿ ಎನ್ನುವರು
ಸಹವಾಸ ಸಾಕೆಂದರೆ ಅಹಂಕಾರಿ ಎನ್ನುವರು
ಸತ್ತವರನ್ನು ಬದುಕಿಸುವಂತೆ ಮಾಡುವರು
ಬದುಕಿದವರನ್ನು ಸಾಯಿಸಿಯೇ ಬಿಡುವರು
ಇದ್ದಾಗ ನಗುವರು.. ಹೋದಾಗ ಅಳುವರು
ಇದೆಲ್ಲವ ಬಿಟ್ಟು ಬಾಳಿದರೆ ಮನುಜನಾಗುವರು..

**ಭಗವಾನ್ ಶ್ರೀಕೃಷ್ಣ**

PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 16-01-2026 to 22-01-2026 ಬೆಲೆ:10-00 ಸಂಪುಟ–1 ಸಂಚಿಕೆ–16 ಪುಟಗಳು–6








ಕೆಲವು ಆಚರಣೆಗಳು ಕಾನೂನು ಭಾಹಿರವಾಗಿದ್ದರೂ ಜನರ ಸಂಪ್ರದಾಯದಲ್ಲಿ ಬೆರೆತು ಹೋಗಿರುತ್ತದೆ. ಅಂತಹ ಆಚರಣೆಗಳಲ್ಲಿ ಗೂಳಿ ಕಾಳಗ, ಕೋಳಿ ಕಾಳಗಗಳೂ ಸೇರಿವೆ. ಕರಾವಳಿ ಜಿಲ್ಲೆಗಳಲ್ಲಿ ಊರ ಜಾತ್ರೆಯ ನಂತರದ ದಿನಗಳಲ್ಲಿ ಕೋಳಿ ಅಂಕ ನೆರವೇರುತ್ತದೆ. ಅದನ್ನು ಜಾತ್ರೆಯ ಅಂಗವೆಂದೇ ಜನ ಇಂದಿಗೂ ಭಾವಿಸುತ್ತಾರೆ. ಆಂಧ್ರ ಪ್ರದೇಶದಲ್ಲಿ ಸಂಕ್ರಾತಿ ಆಚರಣೆಯ ಭಾಗವಾಗಿ ಕೋಳಿ ಅಂಕ ನಡೆಯುವ ಸಂದರ್ಭದಲ್ಲಿ ಸಾವಿರಾರು ಜನ ದೂರದ ಊರುಗಳಿಂದ ಆಗಮಿಸುತ್ತಾರೆ. ಅಚ್ಚರಿ ಎಂದರೆ ಅಧಿಕಾರಿಗಳ ಎಚ್ಚರಿಕೆ ಮಧ್ಯೆಯೂ ಸಂಕ್ರಾಂತಿಯ ಮೊದಲ ದಿನ ಆಂಧ್ರಪ್ರದೇಶದ ಪಶ್ಚಿಮ ಗೋದಾವರಿ, ಪೂರ್ವ ಗೋದಾವರಿ ಮತ್ತು ಕೃಷ್ಣ ಜಿಲ್ಲೆಗಳಾದ್ಯಂತ ಆಯೋಜಿಸಿದ್ದ ಅನಧಿಕೃತ ಹುಂಜಗಳ ಕಾಳಗ ಮತ್ತು ಜೂಜಾಟದಲ್ಲಿ ಕೋಟ್ಯಂತರ ರೂಪಾಯಿ ವ್ಯವಹಾರವಾಗಿದೆ ಎಂದು ವರದಿಯಾಗಿದೆ.

## ಸ್ವಾತಂತ್ರ್ಯ ಹೋರಾಟದಲ್ಲಿ ಮುಸ್ಲಿಂ ಮಹಿಳೆಯರು ಮುಂಚೂಣಿಯಲ್ಲಿದ್ದರು –ಡಾ. ಶರೀಫಾ



**ಮಂಗಳೂರು:** ಸ್ವಾತಂತ್ರ್ಯ ಹೋರಾಟದಲ್ಲಿಯೂ ಮುಂಚೂಣಿಯಲ್ಲಿದ್ದ ಮುಸ್ಲಿಂ ಮಹಿಳೆಯರು, ಕೆಲ ವರ್ಷಗಳ ಹಿಂದೆ ನಡೆದ ಎನ್‌ಆರ್‌ಸಿ–ಸಿಎಎ ಹೋರಾಟದಲ್ಲಿಯೂ ತಮ್ಮ ಮಹತ್ವವನ್ನು ಪ್ರದರ್ಶಿಸಿದ್ದರು. ಮುಸ್ಲಿಂ ಮಹಿಳೆಯರು ಹಲವಾರು ಸಾಧನೆಗಳ ಜತೆಗೆ ಕನ್ನಡ ಸಾಹಿತ್ಯವನ್ನು ಒಳಗೊಂಡಂತೆ ಹಲವು ಪ್ರಥಮಗಳನ್ನು ಸ್ಥಾಪಿಸಿದ್ದೇವೆ ಎಂದು ಖ್ಯಾತ ಸಾಹಿತಿ ಡಾ. ಶರೀಫಾ ಕೆ. ಹೇಳಿದ್ದಾರೆ. ನಗರದ ಕುದ್ಮುಲ್ ರಂಗರಾವ್ ಪುರಭವನದಲ್ಲಿ ಅನುಪಮ ಮಹಿಳಾ ಮಾಸಿಕದ ಬೆಳ್ಳಿ ಹಬ್ಬ ಸಂಭ್ರಮ ಹಾಗೂ **3ನೇ ಪುಟಕ್ಕೆ**

## ದಲಿತ ಸಿಎಂ ಆಗದಿರುವುದು ನೋವಿದೆ –ಮುನಿಯಪ್ಪ



**ಬೆಂಗಳೂರು:** ರಾಜ್ಯದಲ್ಲಿ ದಲಿತ ಸಿಎಂ ಆಗದಿರೋದರ ಬಗ್ಗೆ ನಮಗೆ ನೋವಿದೆ. ಹೈಕಮಾಂಡ್ ಮನಸ್ಸು ಮಾಡಿದರೆ ಎಲ್ಲಾ ಆಗುತ್ತದೆ ಎಂದು ಸಚಿವ ಕೆ.ಹೆಚ್.ಮುನಿಯಪ್ಪ ತಿಳಿಸಿದರು. ಬೆಂಗಳೂರಲ್ಲಿ ದಲಿತ ಸಿಎಂ ಮಾಡುವ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಎಲ್ಲವನ್ನೂ ಹೈಕಮಾಂಡ್ ತೀರ್ಮಾನ ಮಾಡಬೇಕು. ಮಲ್ಲಿಕಾರ್ಜುನ ಖರ್ಗೆ ಕಾಲದಲ್ಲೇ ಆಗಬೇಕು ಎಂದು ಇತ್ತು. ಹೈಕಮಾಂಡ್ ಮನಸ್ಸು ಮಾಡಿದರೆ ಎಲ್ಲ ಆಗುತ್ತದೆ. ಹೈಕಮಾಂಡ್‌ಗೆ ಯಾವ ಕಾಲದಲ್ಲಿ ಏನು ಆಗಬೇಕು ಅಂತ ಗೊತ್ತಿದೆ. ಮಾಡುವ ಸ್ಥಾನದಲ್ಲಿ ಖರ್ಗೆಯವರು ಕೂತಿದ್ದಾರೆ. ನಾವು ಇನ್ನೇನು ಮಾತನಾಡೋದು ಎಂದರು. ನಮಗೆ ಇದೊಂದು ನೋವಿದೆ. ಶೇ25ರಷ್ಟು ಇರುವ ಸಮುದಾಯ ಶೇ75ರಷ್ಟು ಮತಗಳನ್ನು ಕಾಂಗ್ರೆಸ್‌ಗೆ ಹಾಕುತ್ತಾರೆ. ಇದೆಲ್ಲವನ್ನೂ ಹೈಕಮಾಂಡ್‌ಗೆ ಮನವರಿಕೆ ಮಾಡಿಕೊಟ್ಟಿದ್ದೇವೆ. 2028ಕ್ಕೆ **3ನೇ ಪುಟಕ್ಕೆ**

## ಕಾಂಗ್ರೆಸ್ಸಿಗರ ಕುರ್ಚಿ ಕಾದಾಟದಿಂದ ಅಭಿವೃದ್ಧಿ ಶೂನ್ಯ: ಬಿ.ವೈ.ವಿ



**ಚಿತ್ರದುರ್ಗ:** ಕಾಂಗ್ರೆಸ್ ನಾಯಕರ ಕುರ್ಚಿ ಕಾದಾಟದಿಂದಾಗಿ ರಾಜ್ಯದ ಜನರು ತೊಂದರೆ ಅನುಭವಿಸುತ್ತಿದ್ದಾರೆ. ರಾಜ್ಯದಲ್ಲಿ ಅಭಿವೃದ್ಧಿ ಸಂಪೂರ್ಣ ಕುಂಠಿತವಾಗಿದ್ದು, ಜನರು ಸರ್ಕಾರದ ವಿರುದ್ಧ ಹಿಡಿಶಾಪ ಹಾಕುತ್ತಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ. ಚಿತ್ರದುರ್ಗದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಜರ್ಮನಿಯ ಚಾನ್ಸೆಲರ್ ಕರ್ನಾಟಕಕ್ಕೆ ಭೇಟಿ ನೀಡಿದ್ದ ಸಂದರ್ಭದಲ್ಲಿ, ರಾಜ್ಯಕ್ಕೆ ಹೂಡಿಕೆ ತರುವ ಬಗ್ಗೆ ಗಮನಹರಿಸಬೇಕಿದ್ದ ಮುಖ್ಯಮಂತ್ರಿಗಳು **3ನೆ ಪುಟಕ್ಕೆ**







# ಸ್ವಾತಂತ್ರ್ಯ ಹೋರಾಟದಲ್ಲಿ ಮುಸ್ಲಿಂ ಮಹಿಳೆಯರು ಮುಂಚೂಣಿಯಲ್ಲಿದ್ದರು – ಡಾ. ಶರೀಫಾ

ಒಂದನೇ ಪುಟದಿಂದ......

ವಿಶೇಷ ಸಂಚಿಕೆಯನ್ನು ಬಿಡುಗಡೆಗೊಳಿಸಿ ಅವರು ಮಾತನಾಡಿ, ಪತ್ರಿಕೆಯನ್ನು ನಡೆಸುವುದು ಸುಲಭದ ಕೆಲಸವಲ್ಲ. ನಮ್ಮ ಕಣ್ಣೆದುರೇ ಅದೆಷ್ಟೋ ಪತ್ರಿಕೆಗಳು ನೆಲಕಚ್ಚಿರುವುದನ್ನು ನೋಡಿದ್ದೇವೆ. ಇಂತಹ ಸಂದರ್ಭದಲ್ಲಿ ಮುಸ್ಲಿಂ ಮಹಿಳೆಯರಿಗೆ ಮನೆಯಿಂದ ಹೊರ ಬರಲು ಅವಕಾಶಗಳೇ ಕಡಿಮೆಯಿದ್ದ ಕಾಲಘಟ್ಟದಲ್ಲಿ, ಹಿಜಾಬ್ ಧರಿಸಿದ ಮಹಿಳೆಯ ನೇತೃತ್ವದಲ್ಲಿ ಅನೇಕ ಎಡರು ತೊಡರುಗಳ ನಡುವೆ ಅನುಪಮ ಮಾಸಿಕ 25 ವರ್ಷಗಳನ್ನು ಪೂರೈಸಿರುವುದು ನಿಜಕ್ಕೂ ಪ್ರಶಂಸನಾರ್ಹ. ಪತ್ರಿಕೆಯುನೈತಿಕತೆಯನ್ನು ಅನುಸರಿಸಿಕೊಂಡು ಅಕ್ಷರಬಳಕೆಯ ಗೌರವವನ್ನು ಕಾಪಾಡಿಕೊಂಡು ಬರುತ್ತಿದೆ ಎಂದು ಅವರು ಬಣ್ಣಿಸಿದರು. ಪತ್ರಕರ್ತೆ ಗೌರಿ ಹಾಗೂ ಬಿಲ್ಕೀಸ್‌ಬಾನು ಪ್ರಕರಣಗಳಲ್ಲಿ ಆರೋಪಿಗಳ ಖುಲಾಸೆಯನ್ನು ಉಲ್ಲೇಖಿಸಿದ ಡಾ. ಶರೀಫಾ, "ನಮ್ಮ ಹೋರಾಟಗಳು ಏಕೆ ಹೀಗಾಗುತ್ತಿವೆ?" ಎಂದು ಯೋಚಿಸಿದಾಗ ಆತಂಕವಾಗುತ್ತದೆ ಎಂದರು. ಕರಾವಳಿಯಲ್ಲಿ ಹಿಜಾಬ್ ಪ್ರಕರಣದಿಂದಾಗಿ ಹಲವು ಮಹಿಳೆಯರ ಶಿಕ್ಷಣಕ್ಕೆ ಹಿನ್ನಡೆ ಉಂಟಾಗಿದೆ. ಕೋಮು ದ್ವೇಷದ ಭಾಷಣ ಮಾಡಬಾರದು ಎಂಬ ಉದ್ದೇಶದಿಂದ ಮಸೂದೆ ತರಲು ಮುಂದಾದರೆ ಅದನ್ನು ವಿರೋಧಿಸುವ ಕೋಮುವಾದಿಗಳ ಕಾಲದಲ್ಲಿ ನಾವು ಬದುಕುತ್ತಿದ್ದೇವೆ ಎಂದು ಹೇಳಿದರು.

# ಕಾಂಗ್ರೆಸ್ಸಿಗರ ಕುರ್ಚಿ ಕಾದಾಟದಿಂದ ಅಭಿವೃದ್ಧಿ ಶೂನ್ಯ : ಬಿ.ವೈ.ವಿ

ಒಂದನೇ ಪುಟದಿಂದ......

ಕುರ್ಚಿ ಉಳಿಸಿಕೊಳ್ಳಲು ಹಾಗೂ ಉಪಮುಖ್ಯಮಂತ್ರಿಗಳು ಕುರ್ಚಿ ಕಸಿದುಕೊಳ್ಳಲು ದೆಹಲಿ ನಾಯಕರ ಹಿಂದೆ ಬಿದ್ದಿದ್ದಾರೆ. ಒಬ್ಬರು ನಾಯಕರ ತಾಳ್ಮೆ ಕೆಣಕಬೇಡಿ ಎನ್ನುತ್ತಾರೆ, ಮತ್ತೊಬ್ಬರು ಸಿಎಂ ಆಗಲು ಸಿದ್ಧರಾಗಿದ್ದಾರೆ. ಇವರ ಈ ಜಗಳದಿಂದ ರಾಜ್ಯದ ಪರಿಸ್ಥಿತಿ ಅಧೋಗತಿಗೆ ತಲುಪಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರ, ಕಾನೂನು ಸುವ್ಯವಸ್ಥೆ ವೈಫಲ್ಯ, ಡ್ರಗ್ಸ್ ಹಾವಳಿ ಹಾಗೂ ರೈತರ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಜ.17 ರಂದು ಬಳ್ಳಾರಿಯಲ್ಲಿ ಬೃಹತ್ ಹೋರಾಟ ಹಮ್ಮಿಕೊಳ್ಳಲಾಗಿದೆ. ಈ ಪ್ರತಿಭಟನೆಯಲ್ಲಿ ಜನಾರ್ದನರೆಡ್ಡಿ, ಶ್ರೀರಾಮುಲು ಸೇರಿದಂತೆ ಪಕ್ಷದ ಹಿರಿಯ ನಾಯಕರು ಭಾಗವಹಿಸಲಿದ್ದಾರೆ. ಅಲ್ಲದೆ, ಬಳ್ಳಾರಿ ಪಾದಯಾತ್ರೆಯ ಕುರಿತು ಹೈಕಮಾಂಡ್ ಜೊತೆ ಚರ್ಚಿಸಲಾಗಿದ್ದು, ಶೀಘ್ರವೇ ಅಂತಿಮ ನಿರ್ಧಾರ ಪ್ರಕಟವಾಗಲಿದೆ ಎಂದು ತಿಳಿಸಿದರು. ಪ್ರಧಾನಿ ಮೋದಿಯವರು ಮಹಾತ್ಮಗಾಂಧೀಜಿಯವರ ಗ್ರಾಮ ಸ್ವರಾಜ್ಯದ ಕನಸನ್ನು ನನಸು ಮಾಡಲು 'ವಿಕಸಿತ ಭಾರತ ಜಿ ರಾಮ್‌ಜಿ' ಯೋಜನೆಯನ್ನುಜಾರಿಗೆ ತಂದಿದ್ದಾರೆ. ಹಳೆಯ ಮನ್‌ರೇಗಾ ಯೋಜನೆಯಲ್ಲಿದ್ದ ಭ್ರಷ್ಟಾಚಾರವನ್ನು ತಡೆದು, ನೇರವಾಗಿಗ್ರಾಮೀಣ ಭಾಗದ ಆಸ್ತಿ ನಿರ್ಮಾಣಕ್ಕೆಇದು ಒತ್ತು ನೀಡಲಿದೆ ಎಂದು ಅವರು ಹೇಳಿದರು.

# ದಲಿತ ಸಿಎಂ ಆಗದಿರುವುದು ನೋವಿದೆ – ಮುನಿಯಪ್ಪ

ಒಂದನೇ ಪುಟದಿಂದ......

ಮತ್ತೆ ಅಧಿಕಾರಕ್ಕೆ ಬರೋದು ನಮ್ಮ ದೃಷ್ಟಿಕೋನ ಎಂದು ಪರೋಕ್ಷವಾಗಿ ದಲಿತ ಸಿಎಂ ಪರ ಬ್ಯಾಟ್ ಬೀಸಿದರು. ನಾನು ಯಾರ ಪರನೂ ಇಲ್ಲ, ವಿರೋಧನೂ ಇಲ್ಲ. ಸಿಎಂ, ಡಿಸಿಎಂ ರಿಂದ ರಾಹುಲ್ ಗಾಂಧಿ ಭೇಟಿ ವಿಚಾರವಾಗಿ ಪ್ರತಿಕ್ರಿಯಿಸಿ, ರಾಹುಲ್‌ಗಾಂಧಿ ಇಬ್ಬರನ್ನೂ ಕರೆದು ಮಾತನಾಡಿದ್ದಾರೆ. ದೆಹಲಿಗೆ ಹೋಗೋ ವಿಚಾರ ಮಾತನಾಡಿದ್ರು. ಇದು ಹೈಕಮಾಂಡ್‌ಗೆ ಬಿಟ್ಟ ವಿಚಾರ. ಅವರು ಕರೆಯುತ್ತೇವೆ ಅಂದಿದ್ದಾರೆ. ಕರೆದು ಮಾತನಾಡುತ್ತಾರೆ. ನಾನು ಯಾರ ಪರನೂ ಇಲ್ಲ, ವಿರೋಧನೂ ಇಲ್ಲ. ಡಿಸಿಎಂ ಆಗಿ ಒಳ್ಳೆಯ ಕೆಲಸ ಮಾಡಿದ್ದಾರೆ. ಸಿಎಂ ಕೂಡಇತಿಹಾಸ ಸೃಷ್ಟಿ ಮಾಡಿದ್ದಾರೆ ಎಂದರು. ಅರಸು ಪಾಯ ಹಾಕಿದ್ದರು, ಇವರು ಮನೆ ಕಟ್ಟಿದ್ದಾರೆ. ಶೋಷಿತ ವರ್ಗಗಳಿಗೆ ಒಳ್ಳೆಯ ಕೆಲಸ ಮಾಡಿದ್ದಾರೆ. ಒಳ ಮೀಸಲಾತಿ ಮಾಡುವಾಗ ಎಲ್ಲರ ಅಭಿಪ್ರಾಯ ಪಡೆದು ಮಾಡಿದ್ದಾರೆ. ಇದೆಲ್ಲವೂ ಇತಿಹಾಸ ಪುಟಕ್ಕೆ ಸೇರುವ ಕೆಲಸಗಳು. ಸಂಘಟನೆಯಲ್ಲಿ ಡಿಕೆ ಶಿವಕುಮಾರ್ ಅತ್ಯುತ್ತಮ ಕೆಲಸ ಮಾಡಿದ್ದಾರೆ. 136 ಸ್ಥಾನ ಬರಬೇಕು ಎಂದರೆ ಅಷ್ಟು ಸುಲಭ ಅಲ್ಲ ಎಂದರು.

# ಕೆ.ಪಿ.ಟಿ : ಅರೆಕಾಲಿಕ ಡಿಪ್ಲೊಮಾ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಂಗಳೂರು – ಕರ್ನಾಟಕ (ಸರ್ಕಾರಿ) ಪಾಲಿಟೆಕ್ನಿಕ್, ಮಂಗಳೂರು ಇಲ್ಲಿ 2025-26ನೇ ಸಾಲಿನ ಅರೆಕಾಲಿಕ (ಪಾರ್ಟ್-ಟೈಮ್) ದ್ವಿತೀಯ ವರ್ಷದ ಲ್ಯಾಟರಲ್ ಎಂಟ್ರಿ ಡಿಪ್ಲೊಮಾ ಪ್ರವೇಶಕ್ಕೆ ಮೆಕ್ಯಾನಿಕಲ್ ಇಂಜಿನಿಯರಿಂಗ್ ಹಾಗೂ ಎಲೆಕ್ಟ್ರಿಕಲ್ ಆಂಡ್ ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಕೋರ್ಸ್‌ಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

# ಬಾಲ್ಯವಿವಾಹ ಮುಕ್ತ ಗ್ರಾ.ಪಂ ಪ್ರಶಸ್ತಿ : ಅರ್ಜಿ ಆಹ್ವಾನ

ಮಂಗಳೂರು – ಸರ್ಕಾರದ ಆದೇಶದನ್ವಯ 2024-25ನೇ ಸಾಲಿನ ಬಾಲ್ಯವಿವಾಹ ಮುಕ್ತ ಒಂದು ಗ್ರಾಮ ಪಂಚಾಯತಿಯನ್ನು ಗುರುತಿಸಿ ಪ್ರಶಸ್ತಿ ನೀಡಲು ಅರ್ಹ ಗ್ರಾಮ ಪಂಚಾಯತಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ. 0824-2440004 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೀನುಗಾರಿಕೆಯಲ್ಲಿ ಕೌಶಲ್ಯಾಭಿವೃದ್ಧಿ ಯೋಜನಾ ಸಿಬ್ಬಂದಿ ನೇಮಕಾತಿ

ಮಂಗಳೂರು :- ಮಂಗಳೂರಿನ ಮೀನುಗಾರಿಕಾ ಕಾಲೇಜಿನಲ್ಲಿ ಅಸ್ತಿತ್ವದಲ್ಲಿರುವ ಭಾರತ ಸರ್ಕಾರದ ನಗರಾಭಿವೃದ್ಧಿ ಮತ್ತು ಬಡತನ ನಿವಾರಣೆ ಸಚಿವಾಲಯದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮಂಗಳೂರು ಸ್ಮಾರ್ಟ್ ಸಿಟಿ ಲಿಮಿಟೆಡ್ ಪ್ರಾಯೋಜಿತ ಯೋಜನೆಯಾದ ಮೀನುಗಾರಿಕೆಯಲ್ಲಿ ಕೌಶಲ್ಯಾಭಿವೃದ್ಧಿ ಮತ್ತು ಸುರಕ್ಷತಾ ತರಬೇತಿ ಕೇಂದ್ರದಲ್ಲಿ ತಾತ್ಕಾಲಿಕ ಆಧಾರದ ಮೇಲೆ 1 ಸಹ ತರಬೇತುದಾರ ಮತ್ತು ಸಹಾಯಕ ತರಬೇತುದಾರ ಹುದ್ದೆಗಳಿಗೆ ಪುರುಷ ವ್ಯಕ್ತಿಗಳನ್ನು ನೇಮಿಸಿಕೊಳ್ಳಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ 9916924084, 8618660949 ಸಂಪರ್ಕಿಸಬಹುದು.

# ರಾಷ್ಟ್ರೀಯ-ಅಂತರಾಷ್ಟ್ರೀಯ ಕ್ರೀಡಾ ಸಾಧಕರಿಗೆ ಸನ್ಮಾನ

ಶಿವಮೊಗ್ಗ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಜ.26ರಂದು ನಡೆಯುವ ಗಣ ರಾಜ್ಯೋತ್ಸವ ಸಮಾರಂಭದಲ್ಲಿ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದ ಕ್ರೀಡಾಕೂಟದಲ್ಲಿ ಸಾಧನೆಗೈದ ಕ್ರೀಡಾಪಟುಗಳನ್ನು ಸನ್ಮಾನಿಸಲಾಗುವುದು. ಕ್ರೀಡಾಪಟುಗಳು ತಮ್ಮ ಸ್ವವಿವರಗಳ ಅರ್ಜಿಯೊಂದಿಗೆ ಪ್ರಶಸ್ತಿ ಪತ್ರಗಳ ನಕಲುಗಳನ್ನು ದೃಢೀಕರಿಸಿ ಜ.20 ರೊಳಗೆ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇಲ್ಲಿಗೆ ಸಲ್ಲಿಸಬಹುದು.

# ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರಕ್ಕೆ ಸದಸ್ಯ ನೇಮಕಕ್ಕೆ ಅರ್ಜಿ ಆಹ್ವಾನ

ಶಿವಮೊಗ್ಗ : ಕರ್ನಾಟಕ ಪೊಲೀಸ್(ತಿದ್ದುಪಡಿ) ಕಾಯ್ದೆ 2012 ರ ಕಲಂ 20 ರಡಿ(1)(ii) ರನ್ವಯ ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರಕ್ಕೆ ಒಬ್ಬ ಸದಸ್ಯರನ್ನು ನಾಗರೀಕ ಸಮಾಜದಿಂದ ನೇಮಿಸಲು ಅವಕಾಶ ಕಲ್ಪಿಸಿದ್ದು, ಈ ನೇಮಕಾತಿ ಬಗ್ಗೆ ಆಸಕ್ತಿ ಹೊಂದಿರುವವರು ದಿ: 27-01-2026 ರೊಳಗಾಗಿ ಶಿವಮೊಗ್ಗ ಜಿಲ್ಲಾಧಿಕಾರಿಗಳ ಕಚೇರಿಗೆ ಅರ್ಜಿ ಸಲ್ಲಿಸಬಹುದೆಂದು ಅಪರ ಜಿಲ್ಲಾಧಿಕಾರಿಗಳಾದ ಅಭಿಷೇಕ್ ವಿ ತಿಳಿಸಿದ್ದಾರೆ.

# ಅಕಾಡೆಮಿ ಗೌರವ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಡಿಕೇರಿ : ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ವತಿಯಿಂದ 2025ನೇ ವರ್ಷದ ಅಕಾಡೆಮಿ ಗೌರವ ಪ್ರಶಸ್ತಿಗೆ ಅರೆಭಾಷೆ ಸಂಸ್ಕೃತಿ, ಸಾಹಿತ್ಯ, ಕಲೆ, ಮತ್ತು ಅಧ್ಯಯನ ಮುಂತಾದ ಕ್ಷೇತ್ರದಲ್ಲಿ ಅನನ್ಯ ಸೇವೆ ಸಲ್ಲಿಸಿದ ಮಹನೀಯರಿಂದ ಅರ್ಜಿ ಅಹ್ವಾನಿಸಿದ್ದು, ತಲಾ ಒಬ್ಬರಂತೆ 3 ಜನ ಸಾಧಕರನ್ನು ಅಕಾಡೆಮಿ ಗೌರವ ಪ್ರಶಸ್ತಿ 2025 ಕ್ಕೆ ಆಯ್ಕೆ ಮಾಡಲಾಗುವುದು. ಅರ್ಜಿ ಸಲ್ಲಿಸಲು ಜನವರಿ, 31 ಕೊನೆಯ ದಿನವಾಗಿದೆ.

# ಆದಿವಾಸಿ ಆರೋಗ್ಯ ಕಾರ್ಯಕರ್ತೆಯರ ಹುದ್ದೆಗೆ ಅರ್ಜಿ ಆಹ್ವಾನ

ಮಡಿಕೇರಿ : ಅರಣ್ಯಾಧಾರಿತ ಬುಡಕಟ್ಟು ಸಮುದಾಯದವರಿಂದ ಜಿಲ್ಲಾ ಆದಿವಾಸಿ ಆರೋಗ್ಯ ಸಂಯೋಜಕರು (1 ಹುದ್ದೆ) ಹಾಗೂ ತಾಲ್ಲೂಕು ಆದಿವಾಸಿ ಆರೋಗ್ಯ ಕಾರ್ಯಕರ್ತೆಯರ(03 ಹುದ್ದೆ) ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಮೊಬೈಲ್ ಸಂಖ್ಯೆ: 9353799851, 8861957577 ಕಚೇರಿಗಳನ್ನು ಸಂಪರ್ಕಿಸಬಹುದು

# ಆಳ್ವಾಸ್‌ನಲ್ಲಿ ವಿಶ್ವವಿದ್ಯಾಲಯ ಅಥ್ಲೇಟಿಕ್ಸ್ ಕ್ರೀಡಾಕೂಟ 2025-26



ಮೂಡುಬಿದಿರೆ: ಆಳ್ವಾಸ್ ಶಿಕ್ಷಣ ಪ್ರತಿಷ್ಠಾನವು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸಹಯೋಗದಲ್ಲಿ ಇಲ್ಲಿನ ಸ್ವರಾಜ್ಯ ಮೈದಾನದಲ್ಲಿ ಹಮ್ಮಿಕೊಂಡ ಐದು ದಿನಗಳ '85ನೇ ಅಖಿಲ ಭಾರತ ಅಂತರ ವಿಶ್ವವಿದ್ಯಾಲಯ ಅಥ್ಲೆಟಿಕ್ಸ್ ಚಾಂಪಿಯನ್‌ಶಿಫ್ 2025-26' ಸೋಮವಾರ ಅಚ್ಚುಕಟ್ಟಾದ ಮೂಲಸೌಕರ್ಯ, ತಾಂತ್ರಿಕ ನಿಖರತೆ, ಸಮಯ ನಿರ್ವಹಣೆ, ಆತಿಥ್ಯ ವ್ಯವಸ್ಥೆಗಳ, ಶಿಸ್ತುಬದ್ಧತೆ, ಅದ್ದೂರಿ ಮೆರವಣಿಗೆಗಳ ಜೊತೆ ಆರಂಭಗೊಂಡಿತು. ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಆತಿಥ್ಯದಲ್ಲಿ 6ನೇ ಬಾರಿಗೆ (72, 75,80,79 ಹಾಗೂ 81) ನಡೆಯುತ್ತಿರುವ 85ನೇ ಕ್ರೀಡಾಕೂಟವನ್ನು ಉದ್ಘಾಟಿಸಿದ ವಿಧಾನಸಭೆಯ ಸಭಾಪತಿ ಯು. ಟಿ. ಖಾದರ್ ಫರೀದ್ ಮಾತನಾಡಿ, 'ಆಳ್ವಾಸ್ ನಲ್ಲಿ ನಡೆಯುವ ಕ್ರೀಡಾ ಕೂಟವು ಜಾಗತಿಕ ಕೂಟದ ಮಾದರಿ. ದೇಶದ ಎಲ್ಲ ಕ್ರೀಡಾ ಕೂಟಗಳಿಗೂ ಹೆಗ್ಗುರುತು' ಎಂದು ಶ್ಲಾಘಿಸಿದರು. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ. ಭಗವಾನ್ ಬಿ.ಸಿ. ವಿಶ್ವವಿದ್ಯಾ ಲಯದ ಹಾಗೂ ವಿಧಾನ ಪರಿಷತ್ ಸದಸ್ಯ ಎಸ್.ಎಲ್. ಭೋಜೇಗೌಡ ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಧ್ವಜಾರೋಹಣ ನೆರವೇರಿಸಿದರು.

# 'ಕರಾವಳಿ ಕರ್ನಾಟಕ ಪ್ರವಾಸೋದ್ಯಮ ಸಮಾವೇಶ 2026'



ಮಂಗಳೂರು: ಪ್ರವಾಸೋದ್ಯಮ ಇಲಾಖೆ, ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಜಿಲ್ಲಾಡಳಿತ ವತಿಯಿಂದ ಆಯೋಜಿಸಲಾದ 'ಕರಾವಳಿ ಕರ್ನಾಟಕ ಪ್ರವಾಸೋದ್ಯಮ ಸಮಾವೇಶ 2026'ನ್ನು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಗರದ ಖಾಸಗಿ ಹೊಟೇಲ್‌ನಲ್ಲಿ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ಕರಾವಳಿ ಜ್ಞಾನ ಸಂಪತ್ತಿನ ಪರ್ವತ, ದೈವ ದೇವರ ಶಕ್ತಿಕೇಂದ್ರ, ವ್ಯಾಪಾರಿಗಳ ನಿಧಿ, ಪ್ರವಾಸಿಗರ ಸ್ವರ್ಗ, ವಿಶೇಷ್ಟ ಕಲೆ-ಸಂಸ್ಕೃತಿಗಳ ತವರೂರು ಆದರೂ ಪ್ರವಾಸೋದ್ಯಮದಲ್ಲಿ ಹಿಂದೆ ಉಳಿದಿದೆ. ಹಾಗಾಗಿ ಕರಾವಳಿಗೆ ಪ್ರತ್ಯೇಕ ಪ್ರವಾಸೋದ್ಯಮ ನೀತಿಯ ಅಗತ್ಯವಿದೆ. ಈಗಾಗಲೇ ರಾಜ್ಯ ಪ್ರವಾಸೋದ್ಯಮ ನೀತಿಯನ್ನು ಸಿದ್ಧಪಡಿಸಲಾಗಿದ್ದು, ಕರಾವಳಿಯ ಕುರಿತ ಚರ್ಚಿಸಿದ ಬಳಿಕ ಅದನ್ನು ಅಂತಿಮ ಪಡಿಸಲು ಉದ್ದೇಶಿಸಲಾಗಿದೆ. ಈ ನಿಟ್ಟಿನಲ್ಲಿ ಕರಾವಳಿಯಲ್ಲಿ ಮೊದಲ ಹಂತದ ಸಭೆ ಆಯೋಜಿಸಲಾಗಿದೆ ಎಂದರು.

# ಮಂಗಳೂರಿನಲ್ಲಿ ಸಂಚಾರಿ ಆರೋಗ್ಯ ಘಟಕಗಳಿಗೆ ಚಾಲನೆ



ಮಂಗಳೂರು: ದುರ್ಗಮ ಹಾಗೂ ಗುಡ್ಡಗಾಡು ಪ್ರದೇಶಗಳ ಮನೆಬಾಗಿಲಿಗೆ ಅರೋಗ್ಯ ಸೇವೆ ನೀಡುವ ಉದ್ದೇಶದಿಂದ ಸ್ಥಾಪಿಸಲಾಗಿರುವ ಸಂಚಾರಿ ಆರೋಗ್ಯ ಘಟಕಗಳಿಗೆ ಆರೋಗ್ಯ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಅವರು ಚಾಲನೆ ನೀಡಿದರು. ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಚಿವರು, ದ.ಕ. ಜಿಲ್ಲೆಯ 5 ಹಾಗೂ ಉಡುಪಿ ಜಿಲ್ಲೆಯ 4 ಸಂಚಾರಿ ಅರೋಗ್ಯ ಘಟಕ ವಾಹನಗಳಿಗೆ ಹಸುರು ನಿಶಾನೆ ತೋರಿ ಚಾಲನೆ ನೀಡಿದರು. ದಿನೇಶ್ ಗುಂಡೂ ರಾವ್ ಮಾತನಾಡಿ, ರಾಜ್ಯಾದ್ಯಂತ ಒಟ್ಟು 81 ಸಂಚಾರಿ ಅರೋಗ್ಯ ಘಟಕಗಳಿಗೆ ಚಾಲನೆ ನೀಡಲಾಗಿದೆ. ಇದು ಸರಕಾರದ ಜನಪರ ಯೋಜನೆಗಳ ಭಾಗವಾಗಿದೆ. ಸಂಪರ್ಕ ರಹಿತ ಮತ್ತು ಗುಡ್ಡ ಗಾಡು ಪ್ರದೇಶಗಳಿಗೆ ಈ ಆರೋಗ್ಯ ಸೇತು ವಾಹನಗಳು ತೆರಳಿ ಅರೋಗ್ಯ ಸೇವೆ ನೀಡಲಿವೆ ಎಂದು ಹೇಳಿದರು. ಈ ವಾಹನದಲ್ಲಿ ಒಬ್ಬ ವೈದ್ಯರು, ಒಬ್ಬರು ನರ್ಸ್ ಮತ್ತು ಒಬ್ಬ ಲ್ಯಾಬ್ ಟೆಕ್ನೀಷಿಯನ್ ಇರಲಿದ್ದಾರೆ. ಅಗತ್ಯವಿರುವ ಔಷಧಗಳು, ಸಲಕರಣೆಗಳು, ತುರ್ತು ಅರೋ ಗ್ಯ ಪರಿಸ್ಥಿತಿಯ ನಿರ್ವಹಣೆಗೆ ಜೀವನಾವಶ್ಯಕ ಔಷಧಗಳೊಂದಿಗೆ ಈ ಅರೋಗ್ಯ ಸೇತು ವಾಹನವನ್ನು ಸಜ್ಜುಗೊಳಿಸಲಾಗಿದೆ.

# ಭೂಸ್ವಾಧೀನಕ್ಕೆ ಶೀಘ್ರ ಪರಿಹಾರ ಹಣ ಪಾವತಿಸಲು ಡಿಸಿ ಆದೇಶ



ಉಡುಪಿ : ಕಾಪು ತಾಲೂಕಿನ ಮಜೂರು ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ನಿರ್ಮಾಣಗೊಂಡಿರುವ ಕೇಂದ್ರ ಸರಕಾರದ ಕಚ್ಚಾ ತೈಲ ಸಂಗ್ರಹಣಾ ಘಟಕ (ಇಂಡಿಯನ್ ಸ್ಟೆಟೆಜಿಕ್ ಪೆಟ್ರೋಲಿಯಂ ರಿಸರ್ವ್ ಲಿಮಿಟೆಡ್- ಐಎಸ್‌ಪಿಆರ್‌ಎಲ್) ಅಭಿವೃದ್ಧಿಗೆ ಅಗತ್ಯವಿರುವ ಭೂಮಿಯನ್ನು ಸಾರ್ವಜನಿಕರಿಂದ ಈಗಾಗಲೇ ಭೂಸ್ವಾಧೀನ ಪಡಿಸಿ ಕೊಳ್ಳಲಾಗಿದೆ. ಆದರೆ ಕೆಲವರಿಗೆ ಪರಿಹಾರ ಹಣವನ್ನು ನೀಡಿಲ್ಲ ಎಂಬ ಮಾಹಿತಿ ಇದ್ದು, ಈ ಘಟಕಕ್ಕೆ ಭೂಮಿ ನೀಡಿರುವ ಎಲ್ಲಾ ಭೂಮಾಲಕರಿಗೆ ಶೀಘ್ರದಲ್ಲೇ ಪರಿಹಾರ ಹಣವನ್ನು ನೀಡುವಂತೆ ಉಡುಪಿ ಜಿಲ್ಲಾಧಿಕಾರಿ ಸ್ವರೂಪ ಟಿ.ಕೆ. ಅವರು ಕೆಐಎಡಿಬಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಪಾದೂರು ಗ್ರಾಮ ವ್ಯಾಪ್ತಿಯಲ್ಲಿ ಕೈಗೊಂಡಿರುವ ಯೋಜನೆಯ ಎರಡನೇ ಹಂತದ ಕಚ್ಚಾತೈಲ ಸಂಗ್ರಹಣೆ ಕಾಮಗಾರಿಯನ್ನು ಕೈಗೊಳ್ಳುವಾಗ ಸ್ಥಳೀಯ ಜನಸಾಮಾನ್ಯರಿಗೆ ತೊಂದರೆ ಉಂಟಾಗದಂತೆ ಅಗತ್ಯವಿರುವ ಎಲ್ಲಾ ರೀತಿಯ ಮುಂಜಾಗ್ರತೆಯನ್ನು ಕೈಗೊಳ್ಳಬೇಕು ಎಂದೂ ಅವರು ನಿರ್ದೇಶನ ನೀಡಿದರು.

# ಸುಧೀಂದ್ರತೀರ್ಥರ ಅನುಗ್ರಹದಿಂದ ಸಮಾಜದಲ್ಲಿ ಐಕ್ಯತೆ – ಸಂಯಮೀಂದ್ರ ತೀರ್ಥ ಸ್ವಾಮೀಜಿ



ಮಂಗಳೂರು:ಶ್ರೀಮತ್ ಸುಧೀಂದ್ರ ತೀರ್ಥ ಸ್ವಾಮಿಜಿಯವರು ಸಮಾಜದಲ್ಲಿ ಐಕ್ಯತೆ, ಒಗ್ಗಟ್ಟು ಮೂಡಿ ಸಮಾಜ ಅಭಿವೃದ್ಧಿಯಾಗಬೇಕೆಂದು ಅನುಗ್ರಹಿಸಿದ ಕಾರಣ ಗೌಡ ಸಾರಸ್ವತ ಸಮಾಜ ಆದರ್ಶಯುತವಾಗಿ ಬೆಳೆದು ನಿಂತಿದೆ. ಸ್ವಾಮೀಜಿಯವರು ಎಲ್ಲರನ್ನು ಪ್ರೀತಿ, ವಿಶ್ವಾಸದಿಂದ ಆರ್ಶೀವಾದ ಮಾಡಿದ ಪರಿಣಾಮ ಸಮಾಜದ ಏಳಿಗೆಯಾಗಿದೆ. ಅದಕ್ಕೆ ಒಂದೂವರೆ ವರ್ಷದಿಂದ ನಿರಂತರವಾಗಿ ನಡೆದುಕೊಂಡು ಬಂದ ಕಾರ್ಯಕ್ರಮಗಳ ಅದ್ದೂರಿತನ ಹಾಗೂ ಮಂಗಳೋತ್ಸವ ವೈಭವವೇ ಸಾಕ್ಷಿ ಎಂದು ಕಾಶೀಮಠಾಧೀಶರಾದ ಶ್ರೀಮತ್ ಸಂಯಮೀಂದ್ರ ತೀರ್ಥ ಸ್ವಾಮೀಜಿಯವರು ಹೇಳಿದರು. ಅವರು ಮಂಗಳೂರು ರಥಬೀದಿ ಶ್ರೀವೆಂಕಟರಮಣದ ಮುಂಭಾಗದಲ್ಲಿ ನಡೆದ ಮಂಗಳೋತ್ಸವದ ಸಮಾರೋಪ ಸಮಾರಂಭದಲ್ಲಿ ನೆರೆದ ಸಹಸ್ರಾರು ಭಕ್ತರಿಗೆ ಆರ್ಶೀವಚನ ನೀಡಿ ಮಾತನಾಡಿದರು.

# ಕುಂದೇಶ್ವರ ಸಮ್ಮಾನ್ ಪ್ರಶಸ್ತಿಗೆ ಕಾವ್ಯಶ್ರೀ ಅಜೇರು ಆಯ್ಕೆ




ಮಂಗಳೂರು : ಕಾರ್ಕಳ ಹಿರ್ಗಾನ ಶ್ರೀ ಕುಂದೇಶ್ವರ ಕ್ಷೇತ್ರದ ವತಿಯಿಂದ ನೀಡಲಾಗುವ ಪ್ರತಿಷ್ಠಿತ ಶ್ರೀ ಕುಂದೇಶ್ವರ ಸಮ್ಮಾನ್ ಪ್ರಶಸ್ತಿಗೆ ಯಕ್ಷರಂಗದ ಅಗ್ರಮಾನ್ಯ ಮಹಿಳಾ ಭಾಗವತರಾದ ಕಾವ್ಯಶ್ರೀ ಅಜೇರು ಆಯ್ಕೆಯಾಗಿದ್ದಾರೆ. ಶ್ರೀಕುಂ ದೇಶ್ವರ ದೇಗುಲದ ಧರ್ಮದರ್ಶಿಯಾಗಿ, ಯಕ್ಷಗಾನ ಮೇಳ ಸಂಘಟಕ, ಕಲಾವಿದ, ಅರ್ಥಧಾರಿಯಾಗಿದ್ದ ದಿ.ರಾಘವೇಂದ್ರ ಭಟ್ ಸ್ಮರ ಣಾರ್ಥ ಕ್ಷೇತ್ರದ ವತಿಯಿಂದ ಪ್ರಶಸ್ತಿ ನೀಡಲಾಗುತ್ತಿದೆ. ಜ.23ರಂದು ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಆಯ್ಕೆ ಸಮಿತಿ ಸಂಚಾಲಕ ಜಿತೇಂದ್ರ ಕುಂದೇಶ್ವರ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿ ದ್ದಾರೆ. ರಂಗಭೂಮಿ ಕಲಾವಿದರಿಗೆ ನೀಡಲಾಗುವ ಕುಂದೇಶ್ವರ ಕಲಾಭೂಣ ಭೂಷಣ ಪ್ರಶಸ್ತಿ ಈಬಾರಿ ಉಮೇಶ್ ಮಿಜಾರು ಅವರಿಗೆ ಪ್ರಧಾನ ಮಾಡಲಾಗುವುದು ಎಂದರು.

# MRF ಸ್ಥಾಪನೆಗೆ ಕಿಶೋರ್ ಕುಮಾರ್ ಪುತ್ತೂರು ಮನವಿ



ಮಂಗಳೂರು : ಇತ್ತೀಚೆಗೆ ಬೆಳಗಾವಿಯಲ್ಲಿ ನಡೆದ ವಿಧಾನ ಮಂಡಲದ ಅಧಿವೇಶನದಲ್ಲಿ ಕೇಳಲಾದ ಚುಕ್ಕೆ ಗುರುತಿನ ಪ್ರಶ್ನೆಗೆ ದೊರೆತ ಉತ್ತರದ ಪ್ರಕಾರ, ಗ್ರಾಮೀಣ ಭಾಗದ ಪ್ರತಿಯೊಂದು ಮನೆಗೂ ಶುದ್ಧ ಕುಡಿಯುವ ನೀರು ಒದಗಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಜಲ ಜೀವನ್ ಮಿಷನ್ (ಹರ್ ಘರ್ ಜಲ್) ಯೋಜನೆಯ ಡಿ, ದಕ್ಷಿಣ ಕನ್ನಡ ಜಿಲ್ಲೆಯ 230 ಗ್ರಾಮ ಪಂಚಾಯತಿಗಳಲ್ಲಿ ಕಾಮಗಾರಿ ಪೂರ್ಣಗೊಂ ಡಿದ್ದು, 42 ಗ್ರಾಮ ಪಂಚಾಯತಿಗಳಲ್ಲಿ ಕಾಮಗಾರಿ ಇನ್ನೂ ಪ್ರಗತಿಯ ಹಂತದಲ್ಲಿದೆ. ಅದೇ ರೀತಿ, ಉಡುಪಿ ಜಿಲ್ಲೆಯ 155 ಗ್ರಾಮ ಪಂಚಾಯತಿಗಳಲ್ಲಿ ಕಾಮಗಾರಿ ಮುಕ್ತಾಯ ಗೊಂಡಿದ್ದು, 39 ಗ್ರಾಮ ಪಂಚಾಯತಿಗಳಲ್ಲಿ ಕಾಮಗಾರಿ ಪ್ರಗತಿಯಲ್ಲಿದೆ ಎಂಬ ಮಾಹಿತಿ ತಿಳಿದುಬಂದಿದೆ. ಇದರಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವುದನ್ನು ಗಮನಿ ಸಿದ ವಿಧಾನ ಪರಿಷತ್ ಸದಸ್ಯರಾದ ಶ್ರೀ ಕಿಶೋರ್ ಕುಮಾರ್ ಪುತ್ತೂರು ಅವರು, ಈ ಕುರಿತು ತಕ್ಷಣ ಪರಿಶೀಲನೆ ನಡೆಸಿ, ಇನ್ನೂ ಬಾಕಿ ಇರುವ ಕಾಮಗಾರಿಗಳನ್ನು ನಿಗದಿತ ಕಾಲಮಿತಿಯೊಳಗೆ ಗುಣಮಟ್ಟದೊಂದಿಗೆ ಪೂರ್ಣಗೊಳಿಸುವಂತೆ ಪಂಚಾಯತ್ ರಾಜ್ ಇಲಾಖೆಯ ಕಾರ್ಯದರ್ಶಿ ಶ್ರೀ ರಂದೀಪ್ ಐಎಎಸ್ ಅವರಿಗೆ ಮನವಿ ಸಲ್ಲಿಸಿದರು.

# ಬಾಲ ಯೇಸು ಪುಣ್ಯಕ್ಷೇತ್ರದ ಪ್ರತಿಷ್ಠಾಪನೆಯ 30ನೇ ವಾರ್ಷಿಕೋತ್ಸವ




ಮಂಗಳೂರು : ಬಿಕರ್ನಕಟ್ಟೆಯ ಬಾಲ ಯೇಸುವಿನ ಪುಣ್ಯಕ್ಷೇತ್ರವು ಭಾನುವಾರ ತನ್ನ ಪ್ರತಿಷ್ಠಾಪನೆಯ 30ನೇ ವಾರ್ಷಿಕೋತ್ಸವವನ್ನು ಆಚರಿಸುವ ಮೂಲಕ ಒಂದು ಪ್ರಮುಖ ಆಧ್ಯಾತ್ಮಿಕ ಮೈಲಿಗಲ್ಲನ್ನು ಗುರುತಿಸಿತು. ಬಾಲ ಯೇಸುವಿನ ವಾರ್ಷಿಕ ಮಹೋತ್ಸವದ ಸಿದ್ಧತೆಯ ನೊವೇನಾದ ಏಳನೇ ದಿನದಂದು ಈ ಸಂಭ್ರಮವು ನಡೆದಿದ್ದು ವಿಶೇಷವಾಗಿತ್ತು. ಈ ದಿನವನ್ನು 'ಧಾರ್ಮಿಕರ ಮತ್ತು ವೃತ್ತಿ ಪ್ರೋತ್ಸಾಹದ ದಿನ'ವನ್ನಾಗಿ ಆಚರಿಸಲಾಗಿದ್ದು, ಆಚರಣೆಯು ಐತಿಹಾಸಿಕವಾಗಿ ಮಹತ್ವಪೂರ್ಣವಾಗಿ ಮತ್ತು ಆಧ್ಯಾತ್ಮಿಕವಾಗಿ ಸಮೃದ್ಧವಾಗಿತ್ತು. ಈ ದಿನದ ಆಚರಣೆಗಳು ಸಂತ ಶಿಲುಬೆಯ ಯೋಹಾನರಿಂದ ಪ್ರೇರಿತವಾ ದ "ನಾನು ಮಿಂಯಲ್ಲಿ ತೊರೆಗಳನ್ನು ಹರಿಸುವೆನು" ಎಂಬ ಶೀರ್ಷಿ ಕೆಯ ಮೇಲೆ ಕೇಂದ್ರೀಕೃತವಾಗಿದ್ದವು. ಇದು ಕಷ್ಟಕಾಲ ಮತ್ತು ಆಧ್ಯಾತ್ಮಿಕ ಶುಷ್ಕತೆಯ ಸಂದರ್ಭದಲ್ಲೂ ಜೀವನ, ಭರವಸೆ ಮತ್ತು ನವಚೈತನ್ಯವನ್ನು ತರುವ ದೇವರ ರೂಪಾಂ ತರದ ಕೃಪೆಯನ್ನು ಎತ್ತಿ ತೋರಿಸಿತು.

# ವಾಲಿಬಾಲ್ ಪಂದ್ಯಾಟದಲ್ಲಿ ಎಸ್.ಡಿ.ಎಂ ಕಾಲೇಜಿಗೆ ಪ್ರಶಸ್ತಿ



ಉಜಿರೆ : ಧಾರವಾಡ ಜಿಲ್ಲೆಯ ನವಲೂರಿನಲ್ಲಿ ಶ್ರೀ ಬನಶಂಕರಿದೇವಿ ಜಾತ್ರೆಯ ಅಂಗವಾಗಿ ನಡೆದಂತಹ ಅಂತರ್ ರಾಜ್ಯ ಮಟ್ಟದ ಆಹ್ವಾನಿತ ತಂಡಗಳ ಮಹಿಳೆಯರ ಮುಕ್ತ ಹೊನಲು ಬೆಳಕಿನ ವಾಲಿಬಾಲ್ ಪಂದ್ಯಾವಳಿಯಲ್ಲಿ ಭಾಗವಹಿಸಿದ್ದ ಉಜಿರೆಯ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ (ಸ್ವಾಯತ್ತ) ಕಾಲೇಜಿನ ತಂಡವು ಪ್ರಥಮ ಸ್ಥಾನ ಪಡೆದು ಚಾಂಪಿಯನ್‌ಗಳಾಗಿದ್ದಾರೆ. ಪಂದ್ಯಾಟದಲ್ಲಿ ಉತ್ತಮ ಪ್ರದರ್ಶನ ನೀಡಿದ ವಿದ್ಯಾರ್ಥಿನಿ ಪ್ರಿಯಾಂಕ ಉತ್ತಮ ಅಟ್ಯಾಕರ್, ವಿದ್ಯಾರ್ಥಿನಿ ಐಶ್ವರ್ಯ ಬೆಸ್ಟ್ ಲಿಬ್ರೋ ವೈಯಕ್ತಿಕ ಪ್ರಶಸ್ತಿಗಳನ್ನು ಪಡೆದುಕೊಂಡರು. ತಂಡದಲ್ಲಿ ವಿದ್ಯಾರ್ಥಿಗಳಾದ ರಕ್ಷಿತಾ, ಶ್ರಿಯಾ, ಸಂಗೀತ, ಜಸ್ಲಿನ್, ಇಂಚರ, ಸಾಕ್ಷಿ, ಸ್ಮಿತಾ, ಲಾಸ್ಯ, ಅಪೂರ್ವ, ತನು, ಅಂಜಲಿ ಪಾಲ್ಗೊಂಡಿದ್ದರು.

# ರಾಜ್ಯ ಮಟ್ಟದ ಸ್ಕೂಲ್ ಒಲಿಂಪಿಕ್ ಅಥ್ಲೇಟಿಕ್ಸ್ : ಎಸ್.ಡಿ.ಎಂ ವಿದ್ಯಾರ್ಥಿನಿ ಪ್ರಥಮ



ಉಜಿರೆ : ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ನಡೆದ ರಾಜ್ಯ ಮಟ್ಟದ ಸ್ಕೂಲ್ ಒಲಿಂಪಿಕ್ಸ್ ಅಥ್ಲೆಟಿಕ್ಸ್ ಕ್ರೀಡಾಕೂಟದಲ್ಲಿ ಉಜಿರೆಯ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಆಂಗ್ಲ ಮಾಧ್ಯಮ ಶಾಲೆ ಹಾಗು ಎಸ್.ಡಿ.ಎಂ ಕ್ರೀಡಾ ಸಂಘದ ವಿದ್ಯಾರ್ಥಿನಿ ಅನೀಶ ಆರೋಲ್ ಡಿಸೋಜಾ ಗುಂಡೆಸೆತ ಸ್ಪರ್ಧೆಯಲ್ಲಿ ಭಾಗವಹಿಸಿ ಚಿನ್ನದ ಪದಕ ಪಡೆದಿದ್ದಾರೆ. ಪ್ರಸಕ್ತ ಸಾಲಿನಲ್ಲಿ 9ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಕುಮಾರಿ ಅನೀಶ ಇವರು ಇತ್ತೀಚೆಗೆ ಮೈಸೂರಿನ ಚಾಮುಂಡಿ ವಿಹಾರ ಸ್ಟೇಡಿಯಂನಲ್ಲಿ ಆಯೋಜಿಸಲಾದ ರಾಜ್ಯ ಮಟ್ಟದ ಕಿಡ್ಸ್ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್ ನಲ್ಲೂ ಭಾಗವಹಿಸಿ ಪ್ರಥಮ ಸ್ಥಾನ ಪಡೆದಿದ್ದರು.

# ಸುದ್ದಿ ತುಣುಕು

ರಾಜ್ಯ ರಾಜಕೀಯಕ್ಕೆ ಯಾವಾಗ ಬರಬೇಕು ಎಂದು ಜನತೆಯ ಆಶಯದ ಮೇರೆಗೆ ತೀರ್ಮಾನ ಮಾಡುತ್ತೇನೆ ಎಂದು ಹೆಚ್‌ಡಿಕೆ ಹೇಳಿದ್ದಾರೆ.

ಮೇಕೆದಾಟು ಯೋಜನೆಯ ತಾಂತ್ರಿಕ ಅಂಶವನ್ನು ಕೇಂದ್ರ ಜಲ ಆಯೋಗವೇ ತೀರ್ಮಾನ ಮಾಡಬೇಕು ಎಂದು ಸುಪ್ರೀಂ ಕೋರ್ಟ್ ನಿರ್ದೇಶನ ನೀಡಿದೆ.

ಕನ್ನಡ ಚಿತ್ರಗಳಲ್ಲಿ ಅಭಿನಯಿಸಿದ್ದ ನಟಿ ಹಾಗೂ ಬಿಗ್‌ಬಾಸ್ ರಿಯಾಲಿಟಿ ಶೋನ ಮಾಜಿ ಸ್ಪರ್ಧಿ ಕಾರುಣ್ಯ ರಾಮ್ ತನ್ನ ಸಹೋದರಿ ಮೇಲೆ ಹಾಗೂ ಸಾಮಾಜಿಕ ಜಾಲತಾಣದಲ್ಲಿ ಕೆಟ್ಟದಾಗಿ ಕಮೆಂಟ್ ಮಾಡಿದರ ವಿರುದ್ಧ ಸಿಸಿಬಿಗೆ ದೂರು ನೀಡಿದ್ದಾರೆ.

ವಾಲ್ಮೀಕಿ ಸಮುದಾಯ ಭವನ ನಿರ್ಮಾಣ ವಿಚಾರಕ್ಕೆ ಸಂಬಂಧಿಸಿ ಎರಡು ಸಮುದಾಯಗಳ ನಡುವೆ ಘರ್ಷಣೆ ಉಂಟಾಗಿ ಕಟ್ಟಿಗೆ, ಕಲ್ಲುಗಳಿಂದ ಹಲ್ಲೆ ಮಾಡಿರುವ ಘಟನೆ ಬೈಲಹೊಂಗಲ ತಾಲೂಕಿನ ದೇಶನೂರ ಗ್ರಾಮದಲ್ಲಿ ನಡೆದಿದೆ.

ನಮ್ಮ ಹೆಮ್ಮೆಯ ಕನ್ನಡತಿ, ಸೇನಾಧಿಕಾರಿ ಸ್ವಾತಿ ಅವರು 2025ರ ವಿಶ್ವಸಂಸ್ಥೆ ಪ್ರಧಾನ ಕಾರ್ಯದರ್ಶಿ ಪ್ರಶಸ್ತಿ ಗೆದ್ದು ದೇಶದ ಜತೆಗೆ ಕನ್ನಡ ನಾಡಿನ ಹೆಮ್ಮೆಯ ನಾರಿಯಾಗಿ ಹೊರಹೊಮ್ಮಿದ್ದಾರೆ ಎಂದು ಜೋಶಿ ಶ್ಲಾಘಿಸಿದ್ದಾರೆ.

ಏಕ ಕಾಲದಲ್ಲಿ 17ಕ್ಕೂ ಹೆಚ್ಚು ಕಾಡಾನೆಗಳು ರಸ್ತೆ ದಾಟಿರುವ ದೃಶ್ಯ ಜಿಲ್ಲೆಯ ಎನ್. ಆರ್. ಪುರ ತಾಲೂಕಿನ ಮಡಬೂರು ಗ್ರಾಮದಲ್ಲಿ ಕಂಡುಬಂದಿದ್ದು ಅಲ್ಲದೇ, ಅಡಿಕೆ ತೋಟಕ್ಕೆ ನುಗ್ಗಿರುವ ಕಾಡಾನೆಗಳು ಸಂಪೂರ್ಣವಾಗಿ ತೋಟವನ್ನೇ ನಾಶ ಮಾಡಿ ಹೋಗಿವೆ.

ಹಠಾತ್ ಎದೆನೋವಿನಿಂದ ಕನಕ ಗುರುಪೀಠದ ಸಿದ್ದರಾಮನಂದ ಸ್ವಾಮೀಜಿ ನಿಧನರಾಗಿದ್ದಾರೆ. ಆಧ್ಯಾತ್ಮಿಕ ಹಸಿವಿನಿಂದ 18ನೇ ವಯಸ್ಸಿಗೆ ಮನೆ ಬಿಟ್ಟು ಸಂಚಾರ ಆರಂಭಿಸಿದ್ದರು.

ಬೆಂಗಳೂರಿನ ಲಾಲ್‌ಬಾಗ್‌ನಲ್ಲಿ ಏರ್ಪಡಿಸಲಾಗಿರುವ ಪೂರ್ಣಚಂದ್ರ ತೇಜಸ್ವಿ ಕುರಿತ ತೇಜಸ್ವಿ ವಿಸ್ಮಯ ಫಲಪುಷ್ಪ ಪ್ರದರ್ಶನವನ್ನು ಡಿಸಿಎಂ ಡಿ ಕೆ ಶಿವಕುಮಾರ್ ಉದ್ಘಾಟಿಸಿದರು.

ಪುನೀತ್ ರಾಜ್‌ಕುಮಾರ್ ಅವರ ಜೀವನದ ಕಥೆ ಶಾಲಾಪಠ್ಯಪುಸ್ತಕದಲ್ಲಿ ಸೇರ್ಪಡೆ ಆಗಲಿದೆ.

ಬಾಪಟ್ಲಾ ಜಿಲ್ಲೆಯ ಪರ್ಚೂರ್ ತಾಲೂಕಿನ ಅನ್ನಂಬೋಟ್ಲವರಿಪಲೆಂ ಗ್ರಾಮದಲ್ಲಿ ಆಯೋಜಿಸಲಾಗಿದ್ದ ಸಾಂಪ್ರದಾಯಿಕ ಟಗರು ಕಾಳಗವು ಹೆಚ್ಚಿನ ಜನಸಮೂಹವನ್ನು ಆಕರ್ಷಿಸಿತು.

ಕೇಂದ್ರ ಸರ್ಕಾರ ಹೊಸದಾಗಿ ಜಾರಿಗೆ ತಂದಿರುವ ವಿಬಿ ಜಿ ರಾಮ್ ಜಿ ಯೋಜನೆಯ ಬಗ್ಗೆ ಚರ್ಚಿಸಲು ರಾಜ್ಯದಲ್ಲಿ ಉಭಯ ಸದನಗಳ ಜಂಟಿ ಅಧಿವೇಶನ ನಡೆಯಲಿದೆ.

ಅಮೆರಿಕ ಮತ್ತು ಯುರೋಪ್‌ಗೆ ತೆರಳುವ ವಿಮಾನಗಳಿಗಾಗಿ ಏರ್ ಇಂಡಿಯಾ, ಇರಾನ್‌ನ ವಾಯುಪ್ರದೇಶವನ್ನು ಬಳಸುತ್ತದೆ. ಹೀಗಾಗಿ ಏರ್ ಇಂಡಿಯಾ ಅಮೆರಿಕಕ್ಕೆ ತೆರಳುವ ವಿಮಾನಗಳನ್ನು ರದ್ದು ಪಡಿಸಿದೆ.

ಮಧುರೈ, ವಿರುಧುನಗರ, ಶಿವಗಂಗಾ, ರಾಮನಾಥಪುರಂ, ಥೇಣಿ, ದಿಂಡಿಗಲ್ ಮತ್ತು ತಿರುಚ್ಚಿ ಸೇರಿದಂತೆ ಹಲವಾರು ಜಿಲ್ಲೆಗಳಿಂದ 1,000ಕ್ಕೂ ಹೆಚ್ಚು ಹೋರಿಗಳು ಈ ಜಲ್ಲಿಕಟ್ಟಿನಲ್ಲಿ ಭಾಗವಹಿಸುತ್ತಿವೆ.

ವಾಲ್ಮೀಕಿ ನಿಗಮದ ಹಗರಣದಲ್ಲಿ ಮಾಜಿ ಸಚಿವ ಬಿ.ನಾಗೇಂದ್ರಗೆ ಬಿಗ್ ರಿಲೀಫ್ ಸಿಕ್ಕಿದ್ದು, ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ಅವರಿಗೆ ನಿರೀಕ್ಷಣಾ ಜಾಮೀನು ಮಂಜೂರು ಮಾಡಿದೆ.

# ಪೊಂಗಲ್



**ಬೇಕಾಗುವ ಸಾಮಾಗ್ರಿಗಳು :**

ಹೆಸರು ಬೇಳೆ – 3/4 ಕಪ್
ಅಕ್ಕಿ – 3/4 ಕಪ್
ಜೀರಿಗೆ – 1 ಚಮಚ
ಶುಂಠಿ – 1 ಇಂಚು
ಕರಿಬೇವು – 10 ಎಲೆ
ಮೆಣಸಿನ ಕಾಯಿ – 6
ಹೆಚ್ಚಿಕೊಂಡ ಕೊತ್ತಂಬರಿ ಸೊಪ್ಪು–1/2ಕಪ್
ಕಾಳು ಮೆಣಸಿನ ಪುಡಿ – 3/4 ಚಮಚ
ಗೋಡಂಬಿ ನ ಪುಡಿ – 3/4 ಕಪ್
ಉಪ್ಪು – ರುಚಿಗೆ ತಕ್ಕಷ್ಟು
ತುಪ್ಪ – 2 ಚಮಚ
ನೀರು 7 ಕಪ್

**ತಯಾರಿಸುವ ವಿಧಾನ :**

ಕುಕ್ಕರ್ ಪಾತ್ರೆಯಲ್ಲಿ ಅಕ್ಕಿಯ ಜೊತೆ ಹೆಸರು ಬೇಳೆಯನ್ನು ಸೇರಿಸಿ 3 ರಿಂದ 4 ನಿಮಿಷಗಳ ಕಾಲ ಹುರಿಯಬೇಕು. ನಂತರ ಅದಕ್ಕೆ 6 ಕಪ್ ನೀರನ್ನು ಸೇರಿಸಿ, ಕುಕ್ಕರ್ 4–5 ಸೀಟಿ ಕೂಗುವವರೆಗೆ ಬೇಯಿಸಬೇಕು. ನಂತರ ಒಂದು ಪಾತ್ರೆ ಯಲ್ಲಿ ತುಪ್ಪವನ್ನು ಬಿಸಿ ಮಾಡಿ ಅದಕ್ಕೆ ಜೀರಿಗೆ, ಕರಿಬೇವಿನ ಎಲೆ, ತುರಿದುಕೊಂಡ ಶುಂಠಿ ಮತ್ತು ಸೀಳಿಕೊಂಡ ಹಸಿ ಮೆಣಸಿನ ಕಾಯಿಯನ್ನು ಹಾಕಿ, ನಂತರ ಕಾಳು ಮೆಣಸಿನ ಪುಡಿ, ಗೋಡಂಬಿ, ಅರಿಶಿನವನ್ನು ಸೇರಿಸಿ, ಬೇಯಿಸಿಕೊಂಡ ಅನ್ನ ಮತ್ತು ಬೇಳೆಯನ್ನು, ರುಚಿಗೆ ತಕ್ಕಷ್ಟು ಉಪ್ಪು ಜೊತೆಗೆ ಒಂದು ಕಪ್ ನೀರನ್ನು ಹಾಕಿ ಚೆನ್ನಾಗಿ ಮಿಶ್ರಗೊಳಿಸಿ, 10ರಿಂದ 15 ನಿಮಿಷಗಳ ಕಾಲ ಮತ್ತೆ ಬೇಯಿಸಬೇಕು. ನಂತರ ಹೆಚ್ಚಿಕೊಂಡ ಕೊತ್ತಂಬರಿ ಸೊಪ್ಪನ್ನು ಹಾಕಿದರೆ ರುಚಿಯಾದ ಖಾರ ಪೊಂಗಲ್ ಸವಿಯಲು ಸಿದ್ಧ.

# ರಷ್ಯ ಕಾರ್ಯಾಚರಣೆ ಅಮೆರಿಕ ಯುದ್ಧ ವಿಮಾನದ ನಾಶ !



ಮಾಸ್ಕೋ: ಯುಕ್ರೇನಿಯನ್ ಚಾಲಿತ ಎಫ್–16 ಫೈಟಿಂಗ್ ಜೆಟ್ ಅನ್ನು ನಾವು ಹೊಡೆದಿದ್ದೇವೆ ಎಂದು ರಷ್ಯಾದ ಸೇನೆ ತಿಳಿಸಿದೆ. ಈ ಯಶಸ್ವಿ ಕಾರ್ಯಾಚರಣೆಯು ಅಮೆರಿಕ ನಿರ್ಮಿತ ಯುದ್ಧವಿಮಾನದ ನಾಶಕ್ಕೆ ಕಾರಣವಾಗಿದೆ. ರಷ್ಯಾದ ವಾಯು ರಕ್ಷಣಾ ಕಮಾಂಡರ್, ತನ್ನ ಘಟಕವು ಜೆಟ್‌ಅನ್ನು ಪ್ರತಿಬಂಧಿಸಲು ಆಧುನೀಕರಿಸಿದ S–300 ಮೇಲ್ಮೈಯಿಂದ ಆಕಾಶಕ್ಕೆ ಚಿಮ್ಮುವ ಕ್ಷಿಪಣಿ ವ್ಯವಸ್ಥೆಯನ್ನು ಬಳಸಿಕೊಂಡಿದೆ ಎಂದು ಬಹಿರಂಗಪಡಿಸಿದರು.

# ಭಾರತದಷ್ಟು ಯಾವುದೇ ದೇಶವು ಅಮೆರಿಕಕ್ಕೆ ಮುಖ್ಯವಲ್ಲ !

ನವದೆಹಲಿ: ಭಾರತದಷ್ಟು ಯಾವುದೇ ದೇಶವು ಅಮೆರಿಕಕ್ಕೆ ಮುಖ್ಯವಲ್ಲ ಎಂದು ರಾಯಭಾರಿ ಸೆರ್ಗಿಯೊ ಗೋರ್ ಹೇಳಿದ್ದಾರೆ. ವ್ಯಾಪಾರ ಒಪ್ಪಂದವನ್ನು ಬಲಪಡಿಸಲು ಎರಡೂ ಕಡೆಯವರು ಸಕ್ರಿಯವಾಗಿ ಮಾತುಕತೆ ನಡೆಸುತ್ತಿದ್ದಾರೆ. ದೆಹಲಿಗೆ ಭೇಟಿ ನೀಡಿದ ಸಂದರ್ಭದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡುವಿನ ಸ್ನೇಹವನ್ನು ಉಲ್ಲೇಖಿಸಿ, ನಿಜವಾದ ಸ್ನೇಹಿತರು ಭಿನ್ನಾಭಿಪ್ರಾಯ ಹೊಂದಬಹುದು ಎಂದರು.



# ಪಾಕಿಸ್ತಾನಿ ಸೇನೆಯೊಂದಿಗೆ ಭಯೋತ್ಪಾದಕಾ ಸಂಘಟನೆ ನಂಟು



ಇಸ್ಲಾಮಾಬಾದ್: ಪಾಕಿಸ್ತಾನಿ ಸೇನೆಯೊಂದಿಗೆ ಭಯೋತ್ಪಾದಕಾ ಸಂಘಟನೆ ಹೊಂದಿರುವ ನಂಟನ್ನು ಪಾಕಿಸ್ತಾನ ಮೂಲದ ಭಯೋತ್ಪಾದಕ ಸಂಘಟನೆಯ ಲಷ್ಕರ್–ಎ–ತೈಬಾದ ಎರಡನೇ ಪ್ರಮುಖ ನಾಯಕ ಸೈಫುಲ್ಲಾ ಕಸೂರಿ ಒಪ್ಪಿಕೊಂಡಿದ್ದಾನೆ. ಪಾಕಿಸ್ತಾನದ ಒಂದು ಮಕ್ಕಳ ಶಾಲೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಜನರನ್ನು ಉದ್ದೇಶಿಸಿ ಮಾತನಾಡಿದ ಸಂದರ್ಭದಲ್ಲಿ ಕಸೂರಿ ಈ ವಿಚಾರವನ್ನು ದೃಢಪಡಿಸಿದ್ದಾನೆ.

# ನ್ಯೂಯಾರ್ಕ್ ಮೇಯರ್ ಮಮ್ದಾನಿ ಅಸಮಾಧಾನ

ನ್ಯೂಯಾರ್ಕ್: ಯಹೂದಿಗಳು ಹೆಚ್ಚಾಗಿ ವಾಸಿಸುವ ಪ್ರದೇಶದಲ್ಲಿ ಹಮಾಸ್ ಅನ್ನು ಬೆಂಬಲಿಸಿ ಪ್ರತಿಭಟನೆ ನಡೆಸಲಾಯಿತು. ನಾವು ಹಮಾಸ್ ಅನ್ನು ಬೆಂಬಲಿಸುತ್ತೇವೆ ಎಂಬ ಘೋಷಣೆಗಳನ್ನು ಮೊಳಗಿದವು. ಈ ಬಗ್ಗೆ ನ್ಯೂಯಾರ್ಕ್ ನಗರದ ಮೇಯರ್ ಜೋಹ್ರಾನ್ ಮಮ್ದಾನಿ ಅವರು ಆಕ್ರೋಶ ಹೊರಹಾಕಿದ್ದಾರೆ. ಭಯೋತ್ಪಾದಕ ಸಂಘಟನೆಗಳಿಗೆ ಬೆಂಬಲ ನೀಡುವುದನ್ನು ಸಹಿಸಲಾಗುವುದಿಲ್ಲ ಎಂದಿದ್ದಾರೆ.



# ಅಟ್ಟಹಾಸ ಮೆರೆಯುತ್ತಿರುವ ಅಮೇರಿಕನ್ ಪಡೆ



ಕೆರೆಬಿಯನ್ : ಅಮೆರಿಕನ್ ಪಡೆಗಳು ಸತತ ಮೂರನೇ ದಿನವೂ ಕೆರಿಬಿಯನ್ ಸಮುದ್ರದಲ್ಲಿ ಕಾರ್ಯಾಚರಣೆ ನಡೆಸಿ 'ಒಲಿನಾ' ಎಂಬ ತೈಲ ಟ್ಯಾಂಕರ್ ಅನ್ನು ವಶಪಡಿಸಿಕೊಂಡಿವೆ. ಕಾರ್ಯಾಚರಣೆಯಲ್ಲಿ ಯುಎಸ್ ಮೆರೀನ್ ಮತ್ತು ನೌಕಾಪಡೆಯ ಸಿಬ್ಬಂದಿ ತೈಲ ಟ್ಯಾಂಕರ್ ಅನ್ನು ತಡೆದು ವಶಪಡಿಸಿಕೊಂಡಿದ್ದು ಇದು ವೆನೆಜುವೆಲಾದ ತೈಲ ಉತ್ಪಾದನೆಯ ಮೇಲೆ ಟ್ರಂಪ್ ಆಡಳಿತದ ಕಠಿಣ ಕ್ರಮವನ್ನು ಮತ್ತಷ್ಟು ತೀವ್ರಗೊಳಿಸುತ್ತದೆ.

# ಅರಿನಾ ಸಬಲೆಂಕಾಗೆ ಬ್ರಿಸ್ಬೇನ್ ಇಂಟರ್‌ನ್ಯಾಷನಲ್ ಪ್ರಶಸ್ತಿ

ಬ್ರಿಸ್ಬೇನ್: ವಿಶ್ವದ ಅಗ್ರ ಶ್ರೇಯಾಂಕದ ಟೆನಿಸ್ ಆಟಗಾರ್ತಿ ಅರಿನಾ ಸಬಲೆಂಕಾ ಅವರು ನೇರ ಸೆಟ್‌ಗಳಲ್ಲಿ ಉಕ್ರೇನ್‌ನ ಮಾರ್ತಾ ಕೊಸ್ಟಿಯುಕ್ ಅವರನ್ನು ಮಣಿಸಿ ಸತತ ಎರಡನೇ ಬಾರಿಗೆ ಬ್ರಿಸ್ಬೇನ್ ಇಂಟರ್‌ನ್ಯಾಷನಲ್ ಪ್ರಶಸ್ತಿ ಗೆದ್ದುಕೊಂಡರು. ಕ್ವೀನ್ಸ್‌ಲ್ಯಾಂಡ್ ಟೆನಿಸ್ ಸೆಂಟರ್‌ನಲ್ಲಿ ನಡೆದ ಫೈನಲ್‌ನಲ್ಲಿ ಬೆಲಾರೂಸ್‌ನ ಆಟಗಾರ್ತಿ 6–4, 6–3 ರಿಂದ ಗೆದ್ದರು.



# ಶಾಂಪೇನ್ ಸೆಲಿಬ್ರೇಷನ್ ಕೈಬಿಟ್ಟ ಆಸ್ಟ್ರೇಲಿಯಾ ಕ್ರಿಕೆಟ್ ತಂಡ




ಸಿಡ್ನಿ: ಟೆಸ್ಟ್ ವೃತ್ತಿಜೀವನದ ಕೊನೆಯ ಪಂದ್ಯವಾಡಿದ ಉಸ್ಮಾನ್ ಖವಾಜ ಅವರಿಗಾಗಿ ಆಸ್ಟ್ರೇಲಿಯಾ ಕ್ರಿಕೆಟ್ ತಂಡ ವಿನೂತನವಾದ ಗೌರವ ಸಲ್ಲಿಸಿದೆ. ಉಸ್ಮಾನ್ ಖವಾಜ ಅವರಿಗಾಗಿ ಆಸ್ಟ್ರೇಲಿಯಾ ಕ್ರಿಕೆಟ್ ತಂಡವು ಶಾಂಪೇನ್ ಸೆಲಿಬ್ರೇಷನ್ ಕೈಬಿಟ್ಟು ಗಮನ ಸೆಳೆಯುವಲ್ಲಿ ಯಶಸ್ವಿಯಾಗಿದೆ. ಆಸ್ಟ್ರೇಲಿಯಾ–ಇಂಗ್ಲೆಂಡ್ ನಡುವಿನ ಐದು ಪಂದ್ಯಗಳ ನಡುವಿನ ಪ್ರತಿಷ್ಠಿತ ಆಯಶಸ್ ಸರಣಿಯನ್ನು ಆಸ್ಟ್ರೇಲಿಯಾ ತಂಡವು 4–1 ಅಂತರದಲ್ಲಿ ಜಯಿಸಿದೆ.

# ಭಾರತದಿಂದ ಗೆಲುವು ಕಸಿದ ನ್ಯೂಜಿಲೆಂಡ್

ಗುಜರಾತ್ : ಭಾರತ–ನ್ಯೂಜಿಲೆಂಡ್ ಏಕದಿನ ಸರಣಿಯ ಎರಡನೇ ಪಂದ್ಯವನ್ನು ನ್ಯೂಜಿಲೆಂಡ್ ಜಯಿಸಿತು. ಡೇರಿಲ್ ಮಿಶೆಲ್ ಅವರ ಅಜೇಯ ಶತಕದಾಟ(131)ದ ಫಲವಾಗಿ ಪ್ರವಾಸಿ ತಂಡ ಈ ಪಂದ್ಯ ಗೆದ್ದು ಸರಣಿಯನ್ನು 1–1ರಿಂದ ಸಮಬಲಗೊಳಿಸಿತು. ಗುಜರಾತ್‌ನ ರಾಜ್‌ಕೋಟ್‌ನಲ್ಲಿ ಪಂದ್ಯ ನಡೆಯಿತು. ಭಾರತ ನೀಡಿದ 285 ರನ್‌ಗಳ ಗುರಿ ಬೆನ್ನತ್ತಿದ ಕಿವೀಸ್, 47.3 ಓವರ್‌ಗಳಲ್ಲಿ ಗುರಿ ತಲುಪಿ ಸಂಭ್ರಮಿಸಿತು.



# ಶಿಕ್ಷಣದ ಕೊರತೆಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಖರ್ಗೆ



ಕಲಬುರಗಿ : ಜಿಲ್ಲೆಯ ಯಡ್ರಾಮಿಯಲ್ಲಿ ನಡೆದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಚಾಲನಾ ಸಮಾರಂಭದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ತಮ್ಮದೇ ಸರ್ಕಾರದ ಸಚಿವರು ಮತ್ತು ಕೇಂದ್ರ ಸರ್ಕಾರದ ವಿರುದ್ಧ ಗುಡುಗಿದ್ದಾರೆ. ಶಿಕ್ಷಣ ವ್ಯವಸ್ಥೆ, ಪ್ರಾದೇಶಿಕ ಅಸಮಾನತೆ ಮತ್ತು ನರೇಗಾ ಯೋಜನೆ ಕುರಿತು ಖರ್ಗೆ ಆಡಿದ ಮಾತುಗಳು ಈಗ ರಾಜ್ಯ ರಾಜಕೀಯದಲ್ಲಿ ಸಂಚಲನ ಮೂಡಿಸಿವೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಶಿಕ್ಷಣದ ತೀವ್ರ ಕೊರತೆಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಖರ್ಗೆ ಅವರು, ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರಿಗೆ ನೇರ ಎಚ್ಚರಿಕೆ ನೀಡಿದರು.

# ಜಾಗ ಖಾಲಿ ಮಾಡುತ್ತಿರುವ ಕೋಗಿಲು ಲೇಔಟ್‌ನ ಅಕ್ರಮ ನಿವಾಸಿಗಳು!

ಬೆಂಗಳೂರು : ಯಲಹಂಕ ಸಮೀಪದ ಕೋಗಿಲು ಲೇಔಟ್‌ನಲ್ಲಿನ ಅಕ್ರಮ ಒತ್ತುವರಿ ತೆರವು ಕಾರ್ಯಾಚರಣೆ ಈಗ ಹೊಸ ತಿರುವು ಪಡೆದುಕೊಂಡಿದ್ದು, ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ಜಂಟಿಯಾಗಿ ತನಿಖೆಯನ್ನು ತೀವ್ರಗೊಳಿಸುತ್ತಿದ್ದಂತೆಯೇ, ಲೇಔಟ್‌ನಲ್ಲಿದ್ದ ಅಕ್ರಮ ನಿವಾಸಿಗಳು ಜಾಗ ಖಾಲಿ ಮಾಡುತ್ತಿದ್ದಾರೆ. ಕಳೆದ ಕೆಲವು ದಿನಗಳಿಂದ ಪೊಲೀಸರು ಒತ್ತುವರಿದಾರರ ಹಿನ್ನೆಲೆ ಮತ್ತು ದಾಖಲೆಗಳನ್ನು ಜಾಲಾಡಲು ಆರಂಭಿಸಿದ್ದು, ತನಿಖೆ ಚುರುಕಾಗುತ್ತಿದ್ದಂತೆಯೇ ಲೇಔಟ್‌ನಲ್ಲಿದ್ದ ಉತ್ತರ ಪ್ರದೇಶ, ಆಂಧ್ರಪ್ರದೇಶ ಮೂಲದ ಅನೇಕ ಕುಟುಂಬಗಳು ಮನೆಗಳನ್ನು ಖಾಲಿ ಮಾಡಿ ಪರಾರಿಯಾಗುತ್ತಿವೆ.



# ಯುವನಿಧಿಗಾಗಿ ನೋಂದಾವಣೆ : ವಿಟಿಯು ಉಪಕುಲಪತಿ ಕಳವಳ

ಬೆಂಗಳೂರು: ಕಾಂಗ್ರೆಸ್ ಸರ್ಕಾರದ ಪಂಚ ಗ್ಯಾರಂಟಿಗಳಲ್ಲಿ ಒಂದಾದ ಯುವನಿಧಿಗಾಗಿ ಈ ವರ್ಷ ಎಂಜಿನಿಯರಿಂಗ್ ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದಾರೆ ಎಂಬ ವರದಿಗಳ ಬೆನ್ನಲ್ಲೇ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಉಪಕುಲಪತಿ ಡಾ.ಎಸ್.ವಿದ್ಯಾಶಂಕರ್, ಪ್ರಾಧ್ಯಾಪಕರು ಈಗ ರಾಜ್ಯದ ಯುವಜನರಿಗೆ ನೀಡುತ್ತಿರುವ ಶಿಕ್ಷಣದ ಪ್ರಕಾರವನ್ನು ಮರುಪರಿಶೀಲಿಸಬೇಕು ನಿರುದ್ಯೋಗಿ ಯುವಕರ ಸಂಖ್ಯೆಯನ್ನು ಕಡಿಮೆ ಮಾಡಿ, ಇದು ನಾವು ನೀಡುತ್ತಿರುವ ಶಿಕ್ಷಣದ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕುತ್ತದೆ ಎಂದು ಹೇಳಿದರು.



# ಶೇಂಗಾಗೆ ಬಂಪರ್ ಬೆಲೆಯಾದರೂ ನಷ್ಟದಲ್ಲಿ ರೈತ !

ಚಿತ್ರದುರ್ಗ: ಜಿಲ್ಲೆಯಲ್ಲಿ ಈ ಬಾರಿ ಪ್ರತಿಕೂಲ ಮುಂಗಾರಿನಿಂದಾಗಿ ಶೇಂಗಾ ಇಳುವರಿ ಕುಂಠಿತವಾಗಿದ್ದು, ಎಪಿಎಂಸಿಗೆ ಬರುವ ಆವಕದಲ್ಲಿ ಗಣನೀಯ ಪ್ರಮಾಣದ ಇಳಿಕೆಯಾಗಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಶೇ.50ರಷ್ಟು ಆವಕ ಕಡಿಮೆಯಾಗಿದೆ. ಆವಕ ಕಡಿಮೆ ಇರುವುದರಿಂದ ಶೇಂಗಾಕ್ಕೆ ಬಂಪರ್ ಬೆಲೆಯೂ ಇದೆ. ರಾಜ್ಯದ ಶೇಂಗಾ ಬೆಳೆಯುವ ತುಮಕೂರು, ಹಾವೇರಿ, ವಿಜಯಪುರ ಮತ್ತಿತರೆ ಕಡೆ ಕೂಡಾ ಎಪಿಎಂಸಿಗಳಿಗೆ ಶೇಂಗಾ ಆವಕದಲ್ಲಿ ಇಳಿಕೆಯಾಗಿದೆ. ಇದರ ಪರಿಣಾಮ ಶೇಂಗಾ ಎಣ್ಣೆ, ಶೇಂಗಾ ಬೀಜದ ದರದಲ್ಲಿತೀವ್ರ ಹೆಚ್ಚಳವಾಗಲಿದೆ.




# ಬೆಂಗಳೂರಿಗೆ ಫ್ರೆಡ್ರಿಕ್ ಮೆರ್ಜ್ ಭೇಟಿ : ಆರ್ ಅಶೋಕ್ ಕಿಡಿ



ಬೆಂಗಳೂರು : ಬೆಂಗಳೂರಿನ ಬಾಷ್ ಕ್ಯಾಂಪಸ್ ಮತ್ತು ಐಐಎಸ್ಸಿ ನ್ಯಾನೊಸೈನ್ಸ್ ಕೇಂದ್ರಕ್ಕೆ ಕೇಂದ್ರಕ್ಕೆ ಫ್ರೆಡ್ರಿಕ್ ಮೆರ್ಜ್ ಭೇಟಿ ನೀಡಿದ್ದರು. ಈ ಕುರಿತು ಪೋಸ್ಟ್ ಮಾಡಿರುವ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಕರ್ನಾಟಕದ ಹಿತಕ್ಕಿಂತ ಹೈಕಮಾಂಡ್ ಹಂಗೇ ಹೆಚ್ಚಾಯಿತೇ? ಎಂದು ಪ್ರಶ್ನಿಸಿದ್ದಾರೆ. ಒಂದೆಡೆ ಜರ್ಮನಿಯ ಚಾನ್ಸಲರ್ ಬೆಂಗಳೂರಿಗೆ ಆಗಮಿಸುತ್ತಿದ್ದರೆ, ಮತ್ತೊಂದೆಡೆ ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿಕೆ ಶಿವಕುಮಾರ್ ಊಟಿಗೆ ಹೋಗುವ ದಾರಿಯಲ್ಲಿ ಸುಮ್ಮನೆ ಹಾದುಹೋಗುತ್ತಿದ್ದ ರಾಹುಲ್ ಗಾಂಧಿ ಅವರನ್ನು ಸ್ವಾಗತಿಸಲು ಮೈಸೂರಿನಲ್ಲಿ ಸಾಲುಗಟ್ಟಿ ನಿಂತಿದ್ದರು ಎಂದು ಟೀಕಾ ಪ್ರಹಾರ ನಡೆಸಿದ್ದಾರೆ.

# ಕಾಂಗ್ರೆಸ್‌ಗೆ ಕಾಸರಗೋಡು ಕನ್ನಡಿಗರ ಬಗ್ಗೆ ಕಾಳಜಿ ಯಾಕಿಲ್ಲ?

ಬೆಂಗಳೂರು : ಕೇರಳದ 'ಮಲಯಾಳ ಭಾಷಾ ಮಸೂದೆ 2025' ಇದರಿಂದ ಕರ್ನಾಟಕದ ಗಡಿ ಪ್ರದೇಶಗಳ, ವಿಶೇಷವಾಗಿ ಕಾಸರಗೋಡು ಮತ್ತು ಮಂಜೇಶ್ವರದ ಕನ್ನಡ ಮಾಧ್ಯಮ ಶಾಲೆ ಮಕ್ಕಳ ಮೇಲೆ ಆಗುವ ಪರಿಣಾಮಗಳ ಬಗ್ಗೆ ಬಿಜೆಪಿ ಕಳವಳ ವ್ಯಕ್ತಪಡಿಸಿದೆ. ಬಾಂಗ್ಲಾದೇಶದ ಅಕ್ರಮ ವಲಸಿಗರ ಬಗ್ಗೆ ಇರುವ ಕಾಳಜಿ ಕಾಂಗ್ರೆಸ್ ಹೈಕಮಾಂಡ್ ನಾಯಕರಿಗೆ ಕಾಸರಗೋಡು ಕನ್ನಡಿಗರ ಬಗ್ಗೆ ಯಾಕಿಲ್ಲ ಎಂದು ಬಿಜೆಪಿ ನಾಯಕರು ಪ್ರಶ್ನೆ ಮಾಡಿದ್ದಾರೆ. ಈ ವಿಚಾರವಾಗಿ ಎಕ್ಸ್ ಮೂಲಕ ಸಂದೇಶ ಪ್ರಕಟಿಸಿರುವ ಬಿಜೆಪಿ, ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆಸಿ ವೇಣುಗೋಪಾಲ್ ಮತ್ತು ಪ್ರಿಯಾಂಕ ಗಾಂಧಿಗೆ ಹಲವು ಪ್ರಶ್ನೆಗಳನ್ನು ಕೇಳಿದೆ.




# ನಾಯಿ ಕಡಿತವಾದರೆ ರಾಜ್ಯ ಸರ್ಕಾರದಿಂದ ಪರಿಹಾರ ನೀಡಬೇಕು–ಸುಪ್ರೀಂ

ನವದೆಹಲಿ : ದೇಶಾದ್ಯಂತ ಅನೇಕ ನಗರಗಳಲ್ಲಿ ಬೀದಿ ನಾಯಿಗಳ ಕಾಟ ವಿಪರೀತವಾಗಿ ಹೆಚ್ಚುತ್ತಿದೆ. ಈ ವಿಷಯದ ವಿಚಾರಣೆಯ ಸಂದರ್ಭದಲ್ಲಿ ಸುಪ್ರೀಂಕೋರ್ಟ್ ಮಹತ್ವದ ನಿರ್ಧಾರವನ್ನು ತೆಗೆದುಕೊಂಡಿತು. ನಾಯಿ ಕಡಿತಕ್ಕೆ ಪರಿಹಾರವನ್ನು ಸುಪ್ರೀಂಕೋರ್ಟ್ ಪೀಠ ಆದೇಶಿಸಿದೆ. ನಾಯಿ ಕಡಿತದಿಂದ ಮಗು ಅಥವಾ ವೃದ್ಧ ವ್ಯಕ್ತಿ ಗಾಯಗೊಂಡರೆ ಅಥವಾ ಸತ್ತರೆ, ರಾಜ್ಯ ಸರ್ಕಾರ ಪರಿಹಾರವನ್ನು ನೀಡಬೇಕು ಎಂದು ಸುಪ್ರೀಂಕೋರ್ಟ್ ಎಚ್ಚರಿಸಿದೆ. ನಾಯಿ ಕಡಿತದಿಂದ ಮಗು, ವೃದ್ಧರು ಅಥವಾ ವ್ಯಕ್ತಿಗೆ ಸಾವು ಅಥವಾ ಗಾಯವಾದರೆ ರಾಜ್ಯ ಸರ್ಕಾರವು ಭಾರಿ ಪರಿಹಾರವನ್ನು ನಿಗದಿಪಡಿಸಬಹುದು ಎಂದು ಸುಪ್ರೀಂ ಕೋರ್ಟ್ ಹೇಳಿದೆ.



# ಭಾರತ ಹಾಗೂ ಜರ್ಮನಿ ನಡುವೆ ಒಪ್ಪಂದಗಳಿಗೆ ಸಹಿ

ಅಹಮದಬಾದ್ : ಜರ್ಮನಿ ಫೆಡರಲ್ ಚಾನ್ಸಿಲರ್ ಫೆಡ್ರಿಕ್ ಮೆರ್ಜ್ ಭಾರತ ಪ್ರವಾಸದಲ್ಲಿ ಹಲವು ಮಹತ್ವದ ಒಪ್ಪಂದಗಳಿಗೆ ಸಹಿ ಹಾಕಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಹಾಗೂ ಫೆಡ್ರಿಕ್ ಮೆರ್ಜ್ ಅಹಮ್ಮದಾಬಾದ್‌ನಲ್ಲಿ ಭೇಟಿಯಾಗಿ ದ್ವಿಪಕ್ಷೀಯ ಮಾತುಕತೆ ನಡೆಸಿದ್ದಾರೆ. ಭಾರತ ಹಾಗೂ ಜರ್ಮನಿ ನಡುವಿನ ವ್ಯಾಪಾರ ವಹಿವಾಟು, ಭದ್ರತೆ, ಮಾನವ ಸಂಪನ್ಮೂಲ ವಿನಿಮಯ ಸೇರಿದಂತೆ ಹಲವು ಒಪ್ಪಂದಗಳಿಗೆ ಸಹಿ ಬಿದ್ದಿದೆ. ಉಭಯ ರಾಷ್ಟ್ರಗಳು ಜಂಟಿಯಾಗಿ ಕೈಗೊಳ್ಳಬೇಕಾದ ಹಲವು ನಿರ್ಣಯಗಳು ಕುರಿತು ಚರ್ಚೆಯಾಗಿದೆ. ಈ ಪೈಕಿ ಫ್ರೀ ವೀಸಾ ಟ್ರಾನ್ಸಿಟ್ ಸೌಲಭ್ಯ ಭಾರತೀಯರ ಗಮನಸೆಳೆದಿದೆ.



# ಹಲ್ದಿಯಾದಲ್ಲಿ ನೌಕಾನೆಲೆ ಸ್ಥಾಪಿಸಲು ಮುಂದಾದ ಭಾರತ !



ನವದೆಹಲಿ : ಬಂಗಾಲಕೊಲ್ಲಿಯಲ್ಲಿ ಚೀನದ ನೌಕಾ ಚಟುವಟಿಕೆಗಳು ಹೆಚ್ಚುತ್ತಿದ್ದು, ಇತ್ತ ಪಾಕಿಸ್ಥಾನ ಹಾಗೂ ಬಾಂಗ್ಲಾದೇಶದಿಂದಾಗಿ ಪ್ರಾದೇಶಿಕ ಭದ್ರತ ಕಳವಳ ಹೆಚ್ಚುತಿದೆ. ಈ ಹಿನ್ನೆಲೆಯಲ್ಲಿ ಪಶ್ಚಿಮ ಬಂಗಾಲದ ಹಲ್ದಿಯಾದಲ್ಲಿ ನೌಕಾನೆಲೆ ಸ್ಥಾಪಿಸಲು ಭಾರತ ಮುಂದಾಗಿದೆ ಎಂದು ರಕ್ಷಣ ಇಲಾಖೆಯ ಉನ್ನತ ಮೂಲಗಳು ತಿಳಿಸಿವೆ. ಈ ನೌಕಾನೆಲೆಯು ಸಣ್ಣ ಯುದ್ಧನೌಕೆಗಳನ್ನು ನಿಯೋಜಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲಿದೆ ಎನ್ನಲಾಗಿದೆ. ಅಲ್ಲದೇ ಬಂದರು ನಗರಿ ಹಲ್ದಿಯಾದಲ್ಲಿ ಈಗಾಗಲೇ ಇರುವ ಡಾಕಿಂಗ್ ಸಂಕೀರ್ಣವನ್ನು ಈ ನೌಕಾನೆಲೆಯು ಬಳಸಿಕೊಳ್ಳಲಿದೆ ಎನ್ನಲಾಗಿದೆ.

# ಸೋಮನಾಥದ ಮೆರವಣಿಗೆ ಶೌರ್ಯ ಯಾತ್ರೆಗೆ ಪ್ರಧಾನಿ ಚಾಲನೆ

ಸೋಮನಾಥ : ಗುಜರಾತ್‌ನ ಗಿರ್ ಸೋಮನಾಥ ಜಿಲ್ಲೆಯ ಸೋಮನಾಥ ದೇವಾಲಯದ ರಕ್ಷಣೆಗಾಗಿ ಪ್ರಾಣ ತ್ಯಾಗ ಮಾಡಿದವರನ್ನು ಗೌರವಿಸಲು ಆಯೋಜಿಸಲಾದ ವಿಧ್ಯುಕ್ತ ಮೆರವಣಿಗೆ ಶೌರ್ಯ ಯಾತ್ರೆಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡಿದರು. ಸೋಮನಾಥ ಸ್ವಾಭಿಮಾನ್ ಪರ್ವ್‌ನ ಭಾಗವಾಗಿ ಆಯೋಜಿಸಲಾದ ಈ ಯಾತ್ರೆಯಲ್ಲಿ 108 ಕುದುರೆಗಳ ಮೆರವಣಿಗೆ ನಡೆಯಿತು. ಇದು ಶೌರ್ಯ ಮತ್ತು ತ್ಯಾಗವನ್ನು ಪ್ರತಿಬಿಂಬಿಸುತ್ತದೆ. ಪ್ರಧಾನ ಮಂತ್ರಿಯನ್ನು ಸ್ವಾಗತಿಸಲು ಯಾತ್ರೆಯ ಮಾರ್ಗದ ಎರಡೂ ಬದಿಗಳಲ್ಲಿ ಹೆಚ್ಚಿನ ಸಂಖ್ಯೆಯ ಜನರು ಮತ್ತು ಭಕ್ತರು ಜಮಾಯಿಸಿದ್ದರು.



# ಜಾಗತಿಕ ಬೆದರಿಕೆಗಳನ್ನು ಅರ್ಥ ಮಾಡಿಕೊಳ್ಳುವಲ್ಲಿ ವಿಫಲ : ದೋವಲ್

ನವದೆಹಲಿ: ಕೆಲವು ದೇಶಗಳು ತಮ್ಮಲ್ಲಿರುವ ಎಲ್ಲಾ ಅಧಿಕಾರಗಳನ್ನು ಬಳಸಿಕೊಂಡು ತಮ್ಮ ಸ್ವಂತ ಇಚ್ಛೆಯನ್ನು ಇತರರ ಮೇಲೆ ಹೇರುತ್ತಿರುವುದರಿಂದ ಇಂದು ಜಾಗತಿಕ ಮಟ್ಟದಲ್ಲಿ ಇಷ್ಟೊಂದು ಸಂಘರ್ಷಗಳು ನಡೆಯುತ್ತಿವೆ ಎಂದು ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಪ್ರಪಂಚದಾದ್ಯಂತ ನಡೆಯುತ್ತಿರುವ ಎಲ್ಲಾ ಹೋರಾಟಗಳು ಮತ್ತು ಯುದ್ಧಗಳು ಕೆಲವು ದೇಶಗಳು ತಮ್ಮ ಸ್ವಂತ ಇಚ್ಛೆಯನ್ನು ಇತರರ ಮೇಲೆ ಹೇರಲು ಬಯಸುವುದರಿಂದ ಮತ್ತು ಅದಕ್ಕಾಗಿ ತಮ್ಮ ಎಲ್ಲಾ ಶಕ್ತಿಯನ್ನು ಬಳಸುವುದರಿಂದ ಉಂಟಾಗುತ್ತಿದೆ ಎಂದು ದೋವಲ್ ಹೇಳಿದರು.



# ಕಲ್ಲಿದ್ದಲು ಹಗರಣದಲ್ಲಿ ಅಮಿತ್ ಶಾ ಕೂಡ ಭಾಗಿ : ಮಮತಾ

ಕೊಲ್ಕತಾ: ಕಲ್ಲಿದ್ದಲು ಹಗರಣದಲ್ಲಿ ಕೇಂದ್ರ ಗೃಹ ಸಚಿವ ಅಮಿತ್‌ಶಾ ಕೂಡ ಭಾಗಿಯಾಗಿದ್ದಾರೆ. ಅದಕ್ಕೆ ಸಂಬಂಧಿಸಿದ ಪೆನ್‌ಡ್ರೈವ್‌ಗಳು ನನ್ನ ಬಳಿ ಇವೆ ಎಂದು ಪಶ್ಚಿಮಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಪೆನ್‌ಡ್ರೈವ್ ಬಾಂಬ್ ಸಿಡಿಸಿದ್ದಾರೆ. ಐ–ಪ್ಯಾಕ್ ಕಚೇರಿ ಮತ್ತು ಅದರ ನಿರ್ದೇಶಕರ ನಿವಾಸದ ಮೇಲೆ ಜಾರಿ ನಿರ್ದೇಶನಾಲಯ ದಾಳಿ ನಡೆಸಿ ಒಂದು ದಿನದ ಬಳಿಕ ಕೋಲ್ಕತಾದಲ್ಲಿ ತನಿಖಾ ಸಂಸ್ಥೆ ವಿರುದ್ಧ ಪ್ರತಿಭಟನೆ ನಡೆಸಿದ ಬಳಿಕ ಕೇಂದ್ರ ಸರ್ಕಾರದ ವಿರದ್ಧ ವಾಗ್ದಾಳಿ ನಡೆಸಿದರು. ನನ್ನ ಮೇಲೆ ಒತ್ತಡ ಹೇರಿದರೆ ನಾನು ಎಲ್ಲವನ್ನೂ ಬಹಿರಂಗಪಡಿಸುತ್ತೇನೆ ಎಂದು ಬೆದರಿಕೆ ಹಾಕಿದ್ದಾರೆ.





ಕರಾವಳಿ ತರಂಗಿಣಿ

# ಕಲಾ ತರಂಗಿಣಿ



## ಅಮೃತಾಂಜನ್ ಶಾರ್ಟ್ ಮೂವಿ ಈಗ ಬಿಗ್ ಮೂವಿ

ಅಮೃತಾಂಜನ್ ಶಾರ್ಟ್ ಮೂವಿ ಎಲ್ಲರಿಗೂ ನೆನಪಿದ್ದೆ ಇದೆ. ನಕ್ಕು ನಕ್ಕು ಖುಷಿಯಾಗಿದ್ದರು. ಇದೀಗ ಅದೇ ತಂಡ ಸಿನಿಮಾವೊಂದನ್ನ ಮಾಡಿದೆ. ನಿರ್ದೇಶಕ ಜ್ಯೋತಿರಾವ್ ಮೋಹಿತ್ ಅನುಭವವನ್ನ ಹಂಚಿಕೊಂಡಿದ್ದಾರೆ. ಅಮೃತಾಂಜನ್ ಹೆಸರಿನಲ್ಲೇ ಮೂವಿ ಮಾಡೋದಕ್ಕೆ ಕಾರಣ..? ಅಮೃತಾಂಜನ್ ಶಾರ್ಟ್ ಮೂವಿಗೂ ಅಮೃತಾಂಜನ್ ಸಿನಿಮಾಗೂ ಬಹಳ ವ್ಯತ್ಯಾಸವಿದೆ. ನಾನು ಇದಕ್ಕೂ ಮೊದಲು ಸೋಡಾಬುಡ್ಡಿ ಎಂಬ ಸಿನಿಮಾ ಮಾಡಿದ್ದೆ ಅದು ಸೋತು ಹೋಯ್ತು. ಆಮೇಲೆ ಕೆಲಸ ಇಲ್ಲದೆ ಇದ್ದಾಗ ಒಂದು ಶಾರ್ಟ್ ಮೂವಿ ಮಾಡಿದ್ದೆ. ಅದೇ ಅಮೃತಾಂಜನ್. ಇತಿಹಾಸದ ಥರನೇ ಆಗೋಯ್ತು. ಆಮೇಲೆ ಏನಾದ್ರು ಮಾಡ್ಬೇಕು ಅಂತ ಯೋಚ್ನೆ ಮಾಡ್ತಾ ಇದ್ದಾಗ ಅಮೃತಾಂಜನ್ ಸಿನಿಮಾವನ್ನೇ ಬಿಗ್ ಸ್ಕ್ರೀನ್‌ಗೆ ಮಾಡೋಣ ಅಂತ ನಿರ್ಧಾರ ಮಾಡಿದ್ವಿ. ಸಿನಿಮಾ ಫಾರ್ಮೆಟ್ ಗೆ ಏನೆಲ್ಲಾ ಬೇಕೋ ಅದೆಲ್ಲವನ್ನು ಮಾಡಿದ್ದೀವಿ. ಶಾರ್ಟ್ ಮೂವಿ ಗೆದ್ದಿದೆ. ಮೂವಿ ಮೇಲೆ ನಿರೀಕ್ಷೆ..? ಈ ಸಿನಿಮಾದ ಮೇಲೂ 100% ನಿರೀಕ್ಷೆಯನ್ನ ಇಟ್ಟುಕೊಳ್ಳಬಹುದು. ಎಷ್ಟು ಡೀಪ್ ಆಗಿ ವರ್ಕ್ ಮಾಡಿದ್ದೀವಿ ಅಂದ್ರೆ ಒಂದು ವರ್ಷ ಕೂತು ಕಥೆ ಬರೆದಿದ್ದೀವಿ, 3 ತಿಂಗಳು ರಿಹರ್ಸಲ್ ಮಾಡಿದ್ದೀವಿ, ಸೇಮ್ ಟೀಂ ವರ್ಕ್ ಮಾಡಿದ್ದೀವಿ. ಸಿನಿಮಾ ನೋಡುವಾಗ ಮನಸ್ಸಾರೆ 40-45 ಸಲ ಮನಸ್ಸಾರೆ ನಗಬಹುದು. ಪ್ರತಿ ಸೀನ್‌ನಲ್ಲೂ ನಗುವಿಗೆ ಪ್ರಾಮುಖ್ಯತೆ ನೀಡಿದ್ದೇವೆ. ಶಾರ್ಟ್ ಫಿಲ್ಮ್‌ನಲ್ಲಿ ಏನು ಹೊಸ ವಿಷಯ ಕೊಟ್ಟ, ಇಲ್ಲಿ ಒಂದಷ್ಟು ಹೊಸ ವಿಷಯಗಳನ್ನ ಜನರಿಗೆ ಕೊಡ್ತಿದ್ದೀವಿ. ನಾನು ಕುಡಿಯೋದು ಬಿಟ್ರೆ ನೀನು ಮೇಕಪ್ ಹಾಕೋದು ಬಿಡ್ತೀಯಾ. ಈ ಡೈಲಾಗ್ ಒಂದು ಕ್ಯಾರಿ ಮಾಡಿದ್ದೀವಿ. ಬಿಟ್ಟ ಕಥೆ ಎಲೆ ತುಂಬಾನೇ ಹೊಸದಾಗಿದೆ. ಪ್ರತಿಯೊಬ್ಬ ತಂದೆ - ತಾಯಿಯು ಮಕ್ಕಳಿಗೆ ಈ ಥರ ಮಾಡ್ಬೇಕು ಅಂದ್ಕೊಳ್ತಾರೆ. ಅದೇ ಟೈಟಲ್‌ನ ಸಿನಿಮಾ ಮಾಡೋಕೆ ಏನು ಚಾಲೆಂಜ್ ಅನ್ನಿಸ್ತು..? ನಾವೂ ಸಿನಿಮಾ ಮಾಡೋಕೆ ಹೊರಟಾಗ ನೀವೂ ಶಾರ್ಟ್ ಫಿಲ್ಮ್ ಮೇಕರ್ಸ್ ಅಂದ್ರು, ಶಾರ್ಟ್ ಫಿಲ್ಮ್ ಮಾಡಿದಂಗೆ ಮಾಡಿದ್ರೆ ಯಾರು ಸಿನಿಮಾ ನೋಡಲ್ಲ. ಮೊಬೈಲ್ ನೋಡೋ ವೀವರ್ಸ್ ಥಿಯೇಟರ್‌ಗೆ ಬರಲ್ಲ, ಇದು ವರ್ಕೌಟ್ ಆಗಲ್ಲ ಹೀಗೆ ಚಾಲೆಂಜಸ್ ಬಂತು ಎಂದರು.



## 'ಕಟ್ಟೆಮಾರ್' ತುಳು ಚಿತ್ರದ ಟ್ರೇಲರ್ ಬಿಡುಗಡೆ ಜ.23ರಂದು ತೆರೆಗೆ

ಮಂಗಳೂರು: ಅಸ್ತ್ರ ಪ್ರೊಡಕ್ಷನ್ ಸಂಸ್ಥೆಯ ಲಂಚುಲಾಲ್ ಕೆ.ಎಸ್. ನಿರ್ಮಾಣದ ತುಳು ಸಿನಿಮಾ "ಕಟ್ಟೆಮಾರ್" ಇದೇ ಜನವರಿ 23ರಂದು ತೆರೆಗೆ ಬರಲಿದ್ದು, ಅದರ ಟ್ರೇಲರ್ ಬಿಡುಗಡೆ ಸಮಾರಂಭ ಮಂಗಳೂರಿನ ಬಿಗ್ ಸಿನಿಮಾಸ್‌ನಲ್ಲಿ ಗಣ್ಯರ ಉಪಸ್ಥಿತಿಯಲ್ಲಿ ಅದ್ದೂರಿಯಾಗಿ ನೆರವೇರಿತು. ಟ್ರೇಲರ್ ಬಿಡುಗಡೆ ಮಾಡಿ ಮಾತನಾಡಿದ ನಿರ್ಮಾಪಕ ಲಂಚುಲಾಲ್ ಕೆ.ಎಸ್., "ಜನವರಿ 23ರಂದು ಕಟ್ಟೆಮಾರ್ ಸಿನಿಮಾ ಬಿಡುಗಡೆಯಾಗುತ್ತಿದ್ದು, ಬೇರೆ ಭಾಷೆಗಳ ಸಿನಿಮಾಗಳಿಗಿಂತ ತುಳು ಚಿತ್ರವು ಯಾವುದಕ್ಕೂ ಕಡಿಮೆಯಾಗಬಾರದು ಎಂಬ ಉದ್ದೇಶದಿಂದ ಈ ಚಿತ್ರವನ್ನು ಭರ್ಜರಿಯಾಗಿ ನಿರ್ಮಿಸಿದ್ದೇವೆ. ತುಳು ಚಿತ್ರರಂಗಕ್ಕೆ "ಕಟ್ಟೆಮಾರ್" ನಮ್ಮ ವಿಶೇಷ ಕೊಡುಗೆ. ಎಲ್ಲರೂ ಈ ಹೊಸ ಪ್ರಯತ್ನಕ್ಕೆ ಬೆಂಬಲ ನೀಡಬೇಕು. ನಿಮ್ಮ ಬೆಂಬಲ ದೊರೆತರೆ ತುಳು ಸಿನಿ ಇಂಡಸ್ಟ್ರಿಗೆ ಇನ್ನೂ ಹಲವು ಹೊಸ ಸಾಹಸಗಳನ್ನು ಕೈಗೊಳ್ಳಲು ಸಾಧ್ಯವಾಗುತ್ತದೆ" ಎಂದು ಹೇಳಿದರು. ನಟ ರೂಪೇಶ್ ಶೆಟ್ಟಿ ಮಾತನಾಡಿ, "ಈ ಚಿತ್ರಕ್ಕೆ ರಿವ್ಯೂ ಕೊಡುವ ಅವಶ್ಯಕತೆಯೇ ಇಲ್ಲ. ಟ್ರೇಲರ್ ಪ್ರದರ್ಶನದ ವೇಳೆ ಕೇಳಿಬಂದ ಪ್ರೇಕ್ಷಕರ ಚಪ್ಪಾಳೆ, ಶಿಳ್ಳೆಗಳೇ ಇದರ ಮಟ್ಟವನ್ನು ತೋರಿಸಿವೆ" ಎಂದರು. ಮುಖ್ಯ ಪಾತ್ರದಲ್ಲಿ ನಟಿಸಿರುವ ಜೆಪಿ ತುಮಿನಾಡ್ ಮಾತನಾಡಿ, "ಹೊಸತನದ ನಿರೀಕ್ಷೆಯಲ್ಲಿ ಮೂಡಿದ ಚಿತ್ರವೇ ಕಟ್ಟೆಮಾರ್. ಲಂಚುಲಾಲ್ ಅವರು ಸದಾ ಹೊಸ ನಿರ್ದೇಶಕರು ಮತ್ತು ಹೊಸ ಪ್ರತಿಭೆಗಳನ್ನು ತೆರೆಗೆ ತರುತ್ತಿದ್ದಾರೆ. ಈ ಸಿನಿಮಾ ತುಳು ಚಿತ್ರರಂಗಕ್ಕೆ ದೊಡ್ಡ ಕೊಡುಗೆ ಆಗಬಹುದು ಎಂಬ ನಂಬಿಕೆ ನನಗಿದೆ. ಈ ಚಿತ್ರ ಗೆದ್ದರೆ ಇಂಥಾ ವಿಭಿನ್ನ ಪ್ರಯತ್ನಗಳಿಗೆ ಇನ್ನಷ್ಟು ಮಂದಿ ಮುಂದೆ ಬರಲಿದ್ದಾರೆ" ಎಂದರು. ನಿರ್ದೇಶಕ ಸಚಿನ್ ಕಾಟ್ಲ ಮಾತನಾಡಿ, "ಈ ತರಹದ ಸಿನಿಮಾ ಮಾಡಲು ಧೈರ್ಯ ಬೇಕು. ಆ ಧೈರ್ಯವನ್ನು ನಿರ್ಮಾಪಕ ಲಂಚುಲಾಲ್ ತೋರಿಸಿದ್ದಾರೆ. ಈ ಚಿತ್ರದಲ್ಲಿ ಹೊಸತನ ಇದೆ. ಎಲ್ಲರೂ ಬೆಂಬಲ ನೀಡಬೇಕು" ಎಂದು ಮನವಿ ಮಾಡಿದರು. ನಟಿ ಹರ್ಷಿತಾ ಕುಲಾಲ್ ಮಾತನಾಡಿ, ಇದು ಮೊದಲ ಅನುಭವವಾಗಿದ್ದು, ಪ್ರೇಕ್ಷಕರ ಸಹಕಾರವನ್ನು ಕೋರಿದರು. ಸಮಾರಂಭದಲ್ಲಿ ಆಕಾಂಕ್ಷ ರಾವ್, ಪಲ್ಲವಿ ದೇವಾಡಿಗ, ರಕ್ಷಿತ್ ಗಾಣಿಗ, ಮಾಸುಮಾ ಕೊಡಗು ಉಪಸ್ಥಿತರಿದ್ದರು.



## ಸೂರಜ್-ಶರಣ್ಯಾ-ಪ್ರವೀಣ್ ಹೊಸ ರೊಮ್ಯಾಂಟಿಕ್ ಕ್ರೈಂ-ಥ್ರಿಲ್ಲರ್ ಕಹಾನಿ

'ಜಿ9 ಕಮ್ಯುನಿಕೇಶನ್ ಆಂಡ್ ಮೀಡಿಯಾ' ಹಾಗೂ 'ನಿರಂತರ ಪ್ರೊಡಕ್ಷನ್ಸ್' ಸಂಸ್ಥೆಯ ಸಹಯೋಗದಲ್ಲಿ ನಿರ್ಮಾಣವಾಗುತ್ತಿರುವ, ಗುರುರಾಜ ಕುಲಕರ್ಣಿ (ನಾಡಗೌಡ) ನಿರ್ದೇಶನದ ನೂತನ ಚಿತ್ರದ ಶೀರ್ಷಿಕೆ ಅನಾವರಣ ಮತ್ತು ಟೈಟಲ್ ಟೀಸರ್ ಬಿಡುಗಡೆ ಸಮಾರಂಭ ಬೆಂಗಳೂರಿನ 'ಫೀನಿಕ್ಸ್ ಮಾಲ್ ಆಫ್ ಏಷ್ಯಾ'ದಲ್ಲಿ ಅದ್ದೂರಿಯಾಗಿ ನೆರವೇರಿತು. ನಟರಾದ ಸೂರಜ್ ಗೌಡ, ಶರಣ್ಯಾ ಶೆಟ್ಟಿ ಹಾಗೂ ಪ್ರವೀಣ್ ಮುಖ್ಯಭೂಮಿಕೆಯಲ್ಲಿ ಅಭಿನಯಿಸುತ್ತಿರುವ ಈ ಹೊಸಚಿತ್ರಕ್ಕೆ 'ಡಿಯರ್ ಹಸ್ಬೆಂಡ್' ಎಂದು ಹೆಸರಿಡಲಾಗಿದ್ದು, ಸಸ್ಪೆನ್ಸ್ ಕಂ ಥ್ರಿಲ್ಲರ್ ಶೈಲಿಯಲ್ಲಿ ಈ ಚಿತ್ರ ಮೂಡಿಬರುತ್ತಿದೆ. ನಟ ಕಿಚ್ಚ ಸುದೀಪ್, 'ಡಿಯರ್ ಹಸ್ಬೆಂಡ್' ಚಿತ್ರದ ಶೀರ್ಷಿಕೆ ಮತ್ತು ಟೈಟಲ್ ಟೀಸರ್ ಬಿಡುಗಡೆ ಮಾಡಿ ಶುಭ ಹಾರೈಸಿದರು. ನಟರಾದ ಕುಮಾರ್ ಬಂಗಾರಪ್ಪ, ಪ್ರವೀಣ್ ತೇಜ್, ಸಂಗೀತ ನಿರ್ದೇಶಕ ವಿ. ಹರಿಕೃಷ್ಣ, ನಿರ್ದೇಶಕರಾದ ಶಶಾಂಕ್, ಎ. ಪಿ. ಅರ್ಜುನ್, ಕ್ರಿಕೆಟಿಗರಾದ ವೈಶಾಕ್ ವಿಜಯಕುಮಾರ್, ರಿತೇಶ್ ಸೇರಿದಂತೆ ಅನೇಕ ಗಣ್ಯರು 'ಡಿಯರ್ ಹಸ್ಬೆಂಡ್' ಟೈಟಲ್ ಟೀಸರ್ ಬಿಡುಗಡೆ ಸಮಾರಂಭದಲ್ಲಿ ಹಾಜರಿದ್ದರು. ಇನ್ನು 'ಡಿಯರ್ ಹಸ್ಬೆಂಡ್' ಚಿತ್ರದ ಟೈಟಲ್ ಟೀಸರ್ ಬಿಡುಗಡೆ ಮಾಡಿ ಮಾತನಾಡಿದ ನಟ ಕಿಚ್ಚ ಸುದೀಪ್, 'ನಾವು ಹೊಸಬರಾಗಿ ಬಂದಾಗ, ಅನೇಕ ಹಿರಿಯರು ನಮಗೆ ಪ್ರೋತ್ಸಾಹಿಸಿ, ಬೆನ್ನು ತಟ್ಟಿದ್ದರು. ಅದೇ ಕೆಲಸವನ್ನು ನಾವು ಈಗ ಹೊಸಬರಿಗೆ ಮಾಡುತ್ತಿದ್ದೇವೆ. ಅಂತಿಮವಾಗಿ ಕನ್ನಡ ಚಿತ್ರರಂಗ ಬೆಳೆಯಬೇಕು. ಇಡೀ ಚಿತ್ರತಂಡಕ್ಕೆ ಶುಭವಾಗಲಿ. ಹೊಸಬರ ತಂಡದ ಮೂಲಕ ಖಂಡಿತವಾಗಿಯೂ ಹೊಸಥರದ ಸಿನಿಮಾ ಬರಲಿದೆ' ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಸದ್ಯ 'ಡಿಯರ್ ಹಸ್ಬೆಂಡ್' ಚಿತ್ರದ ಪ್ರೀ-ಪ್ರೊಡಕ್ಷನ್ ಕೆಲಸಗಳು ಪೂರ್ಣಗೊಂಡಿದೆ ಎಂದರು.



## 50 ರೂಪಾಯಿಗೆ ಭಾರತಿ ಟೀಚರ್ ಏಳನೇ ತರಗತಿ?

'ಭಾರತಿ ಟೀಚರ್ ಏಳನೇ ತರಗತಿ' ಚಿತ್ರವನ್ನು ಕೇವಲ ಐವತ್ತು ರೂಪಾಯಿ ಟಿಕೆಟ್ ದರದಲ್ಲಿ ಸಿನಿಮಾ ನೋಡಬಹುದೆಂದು ನಿರ್ಮಾಪಕ ರಾಘವೇಂದ್ರ ರೆಡ್ಡಿ ಸಂಕ್ರಾಂತಿ ಹಬ್ಬಕ್ಕೆ ಉಡುಗೊರೆ ಅಂತ ಪ್ರಿ ರಿಲೀಸ್ ಇವೆಂಟ್ ಕಾರ್ಯಕ್ರಮದಲ್ಲಿ ಘೋಷಣೆ ಮಾಡಿದ್ದಾರೆ. ಇದು ಕರ್ನಾಟಕದಲ್ಲಿರುವ ಸಿಂಗಲ್ ಸ್ಕ್ರೀನ್ ಚಿತ್ರಮಂದಿರಗಳಿಗೆ ಮಾತ್ರ ಅನ್ವಯವಾಗುತ್ತದೆ. ಸಿರಗುಪ್ಪ ಮೂಲದ ಉದ್ಯಮಿ ರಾಘವೇಂದ್ರ ರೆಡ್ಡಿ ಅವರು ಪೂಜ್ಯಾಯ ಫಿಲಂಸ್ ಅಡಿಯಲ್ಲಿ ಬಂಡವಾಳ ಹೂಡಿದ್ದಾರೆ. ಗುರುರಾಜ್ ರೆಡ್ಡಿ ಸಹ ನಿರ್ಮಾಪಕರಾಗಿ ಗುರುತಿಸಿಕೊಂಡಿದ್ದಾರೆ. ಕಥೆ, ಚಿತ್ರಕಥೆ, ಸಂಭಾಷಣೆ, ಸಾಹಿತ್ಯ, ಸಂಗೀತ ಮತ್ತು ನಿರ್ದೇಶನವನ್ನು ಎಂ.ಎಲ್. ಪ್ರಸನ್ನ ನಿರ್ವಹಿಸಿದ್ದಾರೆ. ಕ್ರಿಷಿ ಸಂಸ್ಥೆಯ ವೆಂಕಟ್‌ಗೌಡ ಕ್ರಿಯೇಟೀವ್ ಹೆಡ್ ಆಗಿರುತ್ತಾರೆ. ಕನ್ನಡ ಪರ ಹೋರಾಟಗಾರನಾಗಿ ರೋಹಿತ್ ರಾಘವೇಂದ್ರ ನಾಯಕ. ಶಿಕ್ಷಕರಾಗಿ ಸಿಹಿಕಹಿಚಂದ್ರು, ಟೈಟಲ್ ರೋಲ್‌ದಲ್ಲಿ ಕು.ಯಶಿಕಾ, ಕಾಮಿಡಿ ಕಿಲಾಡಿಗಳು ಖ್ಯಾತಿಯ ಗೋವಿಂದೇಗೌಡ ಮೊದಲಬಾರಿ ಖಳನಾಗಿ ಕಾಣಿಸಿಕೊಂಡರೆ, ಇನ್ಸ್‌ಪೆಕ್ಟರ್ ಆಗಿ ಅಶ್ವಿನ್‌ಹಾಸನ್. ಉಳಿದಂತೆ ದಿವ್ಯಾ ಅಂಚನ್, ಬೆನಕಾ ನಂಜಪ್ಪ, ಸೌಜನ್ಯ ಸುನಿಲ್, ಎಂ.ಜೆ.ರಂಗಸ್ವಾಮಿ ಮುಂತಾದವರು ನಟಿಸಿದ್ದಾರೆ. ಛಾಯಾಗ್ರಹಣ ಎಂ.ಬಿ. ಹಳ್ಳಿಕಟ್ಟಿ, ಸಂಕಲನ ಸುಜಿತ್‌ನಾಯಕ್, ವಾದ್ಯ ಸಂಯೋಜನೆ ಕೆ.ಎಂ.ಇಂದ್ರ, ನೃತ್ಯ ಕಂಬಿರಾಜ್, ಕಾರ್ಯಕಾರಿ ನಿರ್ಮಾಪಕ ರಾಘವ್‌ಸೂರ್ಯ-ದರ್ಶನ್‌ಗೌಡ ಅವರದಾಗಿದೆ. ಇನ್ನು ಚಿತ್ರವನ್ನು ಯಾಕೆ ನೋಡಬೇಕು ಎಂದು ನಿರ್ದೇಶಕರು ವಿವರ ನೀಡಿದ್ದಾರೆ. ಇಡೀ ಕರ್ನಾಟಕ ಕನ್ನಡಿಗರಿಂದ ತುಂಬಿರಬೇಕು ಎಂದರು.



## ಶ್ರೀನಿವಾಸ್ ನಿರ್ಮಾಣದ 'ಕಾಟನ್ ಪೇಟೆ ಗೇಟ್' ಫೆಬ್ರವರಿ 13ಕ್ಕೆ ಬಿಡುಗಡೆ



ಆರ್. ಎಸ್. ಪ್ರೊಡಕ್ಷನ್ಸ್ ಮೂಲಕ ಕನ್ನಡ ಚಿತ್ರರಂಗಕ್ಕೆ 'ಯುವರಾಜ', 'ಕಂಠಿ', 'ಭರ್ಜರಿ', 'ಬಹದ್ದೂರ್' ಸೇರಿದಂತೆ ಸಾಕಷ್ಟು ಸೂಪರ್ ಹಿಟ್ ಚಿತ್ರಗಳನ್ನು ನೀಡಿರುವ ಆರ್. ಶ್ರೀನಿವಾಸ್ ಅವರು ನಿರ್ಮಿಸಿರುವ ಮತ್ತೊಂದು ಬಹುನಿರೀಕ್ಷಿತ ಚಿತ್ರ 'ಕಾಟನ್ ಪೇಟೆಗೇಟ್' ಫೆ.13ರಂದು ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಆಕ್ಷನ್, ಕಾಮಿಡಿ, ಸೆಂಟಿಮೆಂಟ್ ಹೀಗೆ ಎಲ್ಲಾ ರೀತಿಯ ಮನರಂಜನಾತ್ಮಕ ಅಂಶಗಳನ್ನು ಒಳಗೊಂಡಿರುವ ಈ ಚಿತ್ರವನ್ನು ವೈ. ರಾಜಕುಮಾರ್ ನಿರ್ದೇಶಿಸಿದ್ದಾರೆ. ಕನ್ನಡ ಹಾಗೂ ತೆಲುಗು ಭಾಷೆಗಳಲ್ಲಿ ಅದ್ದೂರಿಯಾಗಿ ನಿರ್ಮಾಣವಾಗಿದೆ. ಯೋಗಿ ರೆಡ್ಡಿ ಛಾಯಾಗ್ರಹಣ, ಎನ್.ಎಸ್. ಪ್ರಸು ಸಂಗೀತ ಸಂಯೋಜನೆ, ಚೇತನ್ ಕುಮಾರ್ ಸಾಹಿತ್ಯ, ಶಿವ ಸವರ್ಣಿ ಸಂಕಲನವಿರುವ ಈ ತಾರಾಬಳಗದಲ್ಲಿ ವೇಣುಗೋಪಾಲ್, ಯಶ್ವನ್, ಸುರಭಿ ತಿವಾರಿ, ಅನುಶಾ ಜೈನ್, ಸುಧೀಕ್ಷಾ, ಕಿಸ್ಲೆ ಚೌಧರಿ, ಪಾರ್ಥ, ಸಾಯಿಕುಮಾರ್, ರಘು, ಕಟ್ಟಪ್ಪ. ಮುಂತಾದವರು ನಟಿಸಿದ್ದಾರೆ ಎಂದರು.

## ಎಂ. ಜೆ. ಜಯರಾಜ್ ನಟಿಸಿ, ನಿರ್ದೇಶಿಸಿರುವ 'ದೈವ' ಹಾಡು ಬಿಡುಗಡೆ

ಕಲ್ಪವೃಕ್ಷ ಕ್ರಿಯೇಷನ್ಸ್ ಬ್ಯಾನರ್ ಅಡಿಯಲ್ಲಿ ಶ್ರೀಮತಿ ಜಯಮ್ಮ ಪದ್ಮರಾಜ್ ನಿರ್ಮಿಸಿದ್ದು, ರಾಮಪ್ಪ ಸೋಮಪ್ಪ ಮೇಗಲಮನಿ, ಸೋಮಶೇಖರ್ ಜಿ. ಪಟ್ಟಣಶೆಟ್ಟಿ ಅವರ ಸಹ ನಿರ್ಮಾಣವಿದೆ. ಎಂ. ಜೆ. ಜಯರಾಜ್ ನಿರ್ದೇಶನದ ಜೊತೆಗೆ ನಾಯಕನಾಗೂ ನಟಿಸಿರುವ 'ದೈವ' ಚಿತ್ರದ 'ರಾವಣಾಸುರಂ' ಹಾಡು ಕಲ್ಪವೃಕ್ಷ ಕ್ರಿಯೇಷನ್ಸ್ ಯೂಟ್ಯೂಬ್ ಚಾನಲ್‌ನಲ್ಲಿ ಬಿಡುಗಡೆಯಾಗಿದೆ. ಇದೊಂದು ಪಕ್ಕಾ ದೇಸಿ ಕಥಾಹಂದರ ಹೊಂದಿರುವ ಚಿತ್ರವಾಗಿದ್ದು ಚಿತ್ರದಲ್ಲಿ ಕಾಲಭೈರವನ ಆರಾಧಕನಾಗಿ ಜೋಗಯ್ಯನ ಪಾತ್ರದಲ್ಲಿ ಎರಡು ಗೆಟಪ್‌ಗಳಲ್ಲಿ ಕಾಣಿಸಿಕೊಳ್ಳುವ ನಾಯಕನ ಪರಿಚಯಿಸುವ



ಈ ಹಾಡನ್ನು ಅನಿರುದ್ಧ್ ಶಾಸ್ತ್ರಿ ಮತ್ತು ವಿಜೇತ ಮಂಜಯ್ಯ ಹಾಡಿದ್ದಾರೆ. ಮೂರ್ತಿ ಟಿ.ಎಂ.ರವರ ಸಾಹಿತ್ಯಕ್ಕೆ ವಿಜೇತ್ ಮಂಜಯ್ಯ ಅವರ ಸಂಗೀತವಿದೆ. ಪಕ್ಕಾ ಮಾಸ್ ಆಗಿ ಮೂಡಿಬಂದಿರುವ ಈ ಹಾಡಿಗೆ ವಿನಯ್ ಅವರು ನೃತ್ಯ ನಿರ್ದೇಶನ ಮಾಡಿದ್ದಾರೆ. ಕಮರ್ಷಿಯಲ್ ಸಿನಿಮಾಗೆ ಬೇಕಿರುವ ಎಲ್ಲಾ ಅಂಶಗಳನ್ನು ಈ ಹಾಡು ಒಳಗೊಂಡಿದೆ ಎಂದರು.

## 'ಮಹಾನ್' ವಿಜಯ ರಾಘವೇಂದ್ರ ಅವರ ಫಸ್ಟ್ ಲುಕ್

ಸಂಕ್ರಾಂತಿಗೂ ರೈತರಿಗೂ ಅವಿನಾಭಾವ ಸಂಬಂಧ. ಈ ಹಬ್ಬವನ್ನು ಕೃಷಿಕರು ಸುಗ್ಗಿ ಹಬ್ಬ ಎಂದೇ ಆಚರಿಸುತ್ತಾರೆ. ಅಂತಹ ರೈತರ ಕುರಿತಾದ ಕಥಾಹಂದರ ಹೊಂದಿರುವ ಚಿತ್ರ "ಮಹಾನ್". ಆಕಾಶ್ ಪಿಕ್ಚರ್ಸ್ ಲಾಂಛನದಲ್ಲಿ ಪ್ರಕಾಶ್ ಬುದ್ದೂರು ನಿರ್ಮಿಸುತ್ತಿರುವ, ಕನ್ನಡದಲ್ಲಿ ಸಾಕಷ್ಟು ಸದಭಿರುಚಿಯ ಚಿತ್ರಗಳನ್ನು ನಿರ್ದೇಶಿಸಿರುವ ಪಿ.ಸಿ.ಶೇಖರ್ ನಿರ್ದೇಶಿಸುತ್ತಿರುವ ಈ ಚಿತ್ರದ ನಾಯಕನಾಗಿ ಪ್ರತಿಭಾವಂತ ನಟ ವಿಜಯ ರಾಘವೇಂದ್ರ ನಟಿಸುತ್ತಿದ್ದಾರೆ. ರೈತರ ಕುರಿತಾದ ಈ ಚಿತ್ರದಲ್ಲಿ ವಿಜಯ ರಾಘವೇಂದ್ರ ರೈತನ ಪಾತ್ರದಲ್ಲೇ ಕಾಣಿಸಿಕೊಳ್ಳುತ್ತಿದ್ದಾರೆ. ಸಂಕ್ರಾಂತಿ ಹಬ್ಬಕ್ಕೆ ವಿಜಯ ರಾಘವೇಂದ್ರ ಅವರ ಫಸ್ಟ್‌ಲುಕ್ ಅನ್ನು 'ಮಹಾನ್' ಚಿತ್ರತಂಡ ಬಿಡುಗಡೆ ಮಾಡಿದೆ. ಫಸ್ಟ್ ಲುಕ್‌ಗೆ ಮೆಚ್ಚುಗೆ ವ್ಯಕ್ತವಾಗುತ್ತಿದೆ. ನನ್ನ ವೃತ್ತಿ ಜೀವನದಲ್ಲೇ 'ಮಹಾನ್' ಒಂದು 'ಮಹಾನ್' ಚಿತ್ರವಾಗಲಿದೆ ಎಂದು ಮಾತನಾಡುವ ನಿರ್ದೇಶಕ ಪಿ.ಸಿ.ಶೇಖರ್, ನಮ್ಮ ಚಿತ್ರದಲ್ಲಿ 'ಮಹಾನ್' ಎಂದರೆ ರೈತ. ಇದೊಂದು ರೈತರ ಬದುಕಿನ ಬವಣೆಗಳನ್ನು ತಿಳಿಸುವ ಕಥಾಹಂದರ ಹೊಂದಿರುವ ಚಿತ್ರ. ನಮಗ ದೇಶ ಕಾಯುವ ಸೈನಿಕರು ಎಷ್ಟು ಮುಖ್ಯವೊ, ಅದೇ ರೀತಿ ರೈತರು ಬಹುಮುಖ್ಯ ಎಂದರು.



## 'ಬಯಕೆಗಳು ಬೇರೂರಿದಾಗ'

'ಮದುವೆ ಸ್ವರ್ಗದಲ್ಲಿ ನಿಶ್ಚಯ' ಎನ್ನುವ ನಂಬಿಕೆಗೆ ಕರ್ನಾಟಕದಲ್ಲಿ ಕಳೆದ 5 ವರ್ಷದಲ್ಲಿ ದಾಖಲಾದ 1.7ಲಕ್ಷ ವಿಚ್ಛೇದನ ದಾವೆಗಳು ಸವಾಲಾಗಿಸಿವೆ. ಏನಿದು ವಿರೋಧಾಭಾಸ? ಸ್ವರ್ಗ ಬಂಧನಕ್ಕೆ ಮುದ್ರೆ ಹಾಕಬಹುದು. ಆದರೆ ಆ ಬಂಧನವನ್ನು ಪೋಷಿಸುವುದು ನಮ್ಮ ಕೈಯಲ್ಲಿದೆ. ವಿಶಾಲ ಸಂಸ್ಕಾರ, ಸಾಮಾಜಿಕ ಒತ್ತಡಗಳ ನಡುವೆ ಸಂವಾದ, ತಾಳ್ಮೆ, ಹೊಂದಾಣಿಕೆಯ ಮೌಲ್ಯಗಳು ಹಿಂದೆ ಸರಿಯುತ್ತಿವೆ. ಇಂತಹ ಸಂದರ್ಭದಲ್ಲಿ, ಆಕರ್ಷ್ ಆದಿತ್ಯ ಅವರ 'ಬಯಕೆಗಳು ಬೇರೂರಿದಾಗ' ಕಾದಂಬರಿ ಮತ್ತು ಎನ್. ಜ್ಯೋತಿಲಕ್ಷ್ಮಿ ಅವರ ನಿರ್ದೇಶನದ ಸದ್ಯಕ್ಕೇ 25 ಪ್ರಶಸ್ತಿ ಪಡೆದ ಚಲನಚಿತ್ರವು ಪ್ರಸ್ತುತವಾಗಿದೆ. ಕುಟುಂಬ ಮೌಲ್ಯಗಳು ಮತ್ತು ಸಂಬಂಧಗಳ ಸೂಕ್ಷ್ಮ ತಂತುಗಳನ್ನು ಚಿತ್ರಿಸುವ ಈ ಕಥೆ, ಸಮಸ್ಯೆಗಳಿಗೆ ದಾರಿ ಹುಡುಕುವಾಗ ಮಹತ್ವದ ಸಂದೇಶ ನೀಡಬಲ್ಲದು. ಫೆಬ್ರವರಿ 6ರಂದು ಬಿಡುಗಡೆಯಾಗಲಿರುವ ಈ ಚಿತ್ರವನ್ನು ನೋಡುವುದು ಅಥವಾ ನಿಮ್ಮ ಸುತ್ತಮುತ್ತಲಿನವರಿಗೆ ತಿಳಿಸುವುದು, ಸಂಬಂಧಗಳ ಬಗೆಗೆ ಆಳವಾಗಿ ಯೋಚಿಸುವ ಪ್ರೇರಣೆಯಾಗಬಹುದು. ಸ್ವರ್ಗೀಯ 'ನಿಶ್ಚಯ'ವನ್ನು ಭೂಮಿಯ 'ನಿಭಾವಣೆ'ಯಿಂದ ಪೂರ್ಣಗೊಳಿಸಲು, ಇಂತಹ ಕಲಾತ್ಮಕ ಪ್ರಯತ್ನಗಳು ದೀಪ ಸ್ತಂಭಗಳಾಗಬಲ್ಲವು ಎಂದರು.



## ಸಂಕ್ರಾಂತಿಗೆ ತೆರೆಮೇಲೆ 'ಸೂರ್ಯ' ಸಂಕ್ರಮಣ

ಉತ್ತರ ಕರ್ನಾಟಕದ ಬೆಳಗಾವಿಯ ಬಸವರಾಜ ಬೆಣ್ಣೆ ಹಾಗೂ ರವಿ ಬೆಣ್ಣೆ ಸಹೋದರರು ನಂದಿ ಸಿನಿಮಾಸ್ ಅಡಿಯಲ್ಲಿ ನಿರ್ಮಿಸಿರುವ ಚಿತ್ರ 'ಸೂರ್ಯ' ಸಂಕ್ರಾಂತಿ ಹಬ್ಬದ ಕೊಡುಗೆಯಾಗಿ ಜನವರಿ 15ರಂದು ಬಿಡುಗಡೆಯಾಗಲಿದೆ. ಸ್ಲಂನಲ್ಲಿ ಬೆಳೆದ ಯುವಕ ಸೂರ್ಯ, ತನ್ನ ಪ್ರೀತಿಯನ್ನು ಪಡೆದುಕೊಳ್ಳಲು ಏನೆಲ್ಲ ಹೋರಾಟ, ಸಾಹಸ ಮಾಡುತ್ತಾನೆ. ಆತನಿಗೆ ಯಾರೆಲ್ಲ ಸಹಾಯ ಮಾಡುತ್ತಾರೆ ಎಂಬುದನ್ನು ಈ ಚಿತ್ರದ ಮೂಲಕ ನಿರ್ದೇಶಕ ಸಾಗರ್ ದಾಸ್ ಅವರು ಹೇಳ ಹೊರಟಿದ್ದಾರೆ. ಯುವನಟ ಪ್ರಶಾಂತ್ ಈ ಚಿತ್ರದಲ್ಲಿ ನಾಯಕನಾಗಿ ನಟಿಸಿದ್ದು ಹರ್ಷಿತಾ ನಾಯಕಿ ಪಾತ್ರ ನಿರ್ವಹಿಸಿದ್ದಾರೆ. ಈಗಾಗಲೇ ರಿಲೀಸಾಗಿರುವ ಚಿತ್ರದ ಟ್ರೈಲರ್ ಎಲ್ಲಾಕಡೆ ವೈರಲ್ ಆಗಿದೆ. ನಿರ್ದೇಶಕ ಸಾಗರ್ ರಚನೆಯ, ಹೇಮಂತ್ ಕುಮಾರ್, ಪೃಥ್ವಿಭಟ್ ಹಾಡಿರುವ ಬಾರೆ ಬಾರೆ ಅತ್ತೆಯ ಮಗಳೇ ಎಂಬ ಹಾಡಿನ ಬಿಡುಗಡೆ ಸಮಾರಂಭ ಇತ್ತೀಚೆಗೆ ನಡೆಯಿತು. ಈ ಸಂದರ್ಭದಲ್ಲಿ ನಿರ್ದೇಶಕ ಸಾಗರ್ ಮಾತನಾಡಿ ಇದು ಮನರಂಜನೆಗೋಸ್ಕರ ಮಾಡಿದ ಚಿತ್ರ ಎಂದರು.



## ನಾಲ್ಕನೇ ವಾರಕ್ಕೆ ಕಾಲಿಟ್ಟ ಕಿಚ್ಚನ ಮಾರ್ಕ್ ಓಟ

ಬೆಳ್ಳಿಪರದೆಯಲ್ಲಿ ಕಿಚ್ಚನ ಮಾರ್ಕ್ ಮೇನಿಯಾ ಮುಂದುವರೆದಿದೆ. ಮೊದಲ ಎರಡು ವಾರ ಉತ್ತಮ ಕಲೆಕ್ಷನ್ ಮಾಡಿರುವ ಸಿನಿಮಾವೀಗ ನಾಲ್ಕನೇ ವಾರಕ್ಕೆ ಕಾಲಿಡುತ್ತಿದೆ. ಡಿ.25ರಂದು ಬಿಡುಗಡೆಯಾದ ಮಾರ್ಕ್ ಚಿತ್ರ ಮಾಸ್ ಜೊತೆಗೆ ಕ್ಲಾಸ್ ಆಡಿಯನ್ಸ್‌ನ್ನು ತನ್ನತ್ತ ಸೆಳೆದಿದೆ. ಮೂರನೇ ವಾರವೂ ಮಾರ್ಕ್ ಓಟ ಮುಂದುವರೆದು ಕಲೆಕ್ಷನ್ ಚೆನ್ನಾಗಿ ಮಾಡಿ ನಾಲ್ಕನೇ ವಾರಕ್ಕೆ ಕಾಲಿಡುತ್ತಿದೆ. ಅಭಿಮಾನಿಗಳು, ಪ್ರೇಕ್ಷಕರು, ಯುವಕರು ಮತ್ತು ಫ್ಯಾಮಿಲಿ ಆಡಿಯನ್ಸ್ ಚಿತ್ರಕ್ಕೆ ಭಾರಿ ಪ್ರಶಂಸೆ ವ್ಯಕ್ತಪಡಿಸುತ್ತಿದ್ದಾರೆ. ಮಾರ್ಕ್ ಸಿನಿಮಾಗೆ ವಿಜಯ್ ಕಾರ್ತಿಕೇಯ ನಿರ್ದೇಶನ ಮಾಡಿದ್ದಾರೆ. ಈ ಸಿನಿಮಾದಲ್ಲಿ ಸುದೀಪ್ ಜೊತೆ ಯೋಗಿ ಬಾಬು, ನವೀನ್‌ಚಂದ್ರ ಮೊದಲಾದವರು ನಟಿಸಿದ್ದಾರೆ. ಮಾರ್ಕ್ ಚಿತ್ರದಲ್ಲಿ ಕಿಚ್ಚನ ಮ್ಯಾನರಿಸಂ, ಸ್ಟೈಲ್, ಸ್ವಾಗ್ ಅಭಿಮಾನಿಗಳಿಗೆ ಸಖತ್ ಇಷ್ಟವಾಗಿದೆ.





ಕರಾವಳಿ ತರಂಗಿಣಿ

# ಸಿನಿ ತರಂಗಿಣಿ

ವಿಭಿನ್ನ ಕಥಾಹಂದರದ “ಕ್ಲಾಂತ”




ತಾಯಿಯೇ ದೇವರು

ಚಿತ್ರರಂಗವನ್ನು ಕಟ್ಟಿ ಬೆಳೆಸಿದ ಮಹನೀಯರಿಗೆ ನಮನಗಳು

ಕನ್ನಡ ಚಲನಚಿತ್ರ ನಿರ್ಮಾಪಕರ ಸಂಘದ

2026-28ರ ಸಾಲಿನ ಚುನಾವಣೆಯಲ್ಲಿ

ಕಾರ್ಯಕಾರಿ ಸಮಿತಿ ಸದಸ್ಯ ಸ್ಥಾನಕ್ಕೆ ಸ್ಪರ್ಧಿಸಿರುವ ನನಗೆ ತಮ್ಮ ಅಮೂಲ್ಯವಾದ ಮತವನ್ನು ನೀಡಿ ಆಶೀರ್ವದಿಸಿದ ಅನ್ನದಾತ ಬಂಧುಗಳಿಗೆ ಹೃದಯ ಪೂರ್ವಕ ವಂದನೆಗಳು



ಎನ್ನಾರ್ ಕೆ ವಿಶ್ವನಾಥ್

ಅಧ್ಯಕ್ಷರು

ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘ(ರಿ) ಬೆಂಗಳೂರು

President, Karnataka Film Director's Association(R) Bengaluru

EC Member, Karnataka Film Chamber of Commerce Bengaluru

Journalist - Writer - Dramatist Film Director - Producer & Distributor






ROHAN CORPORATION

CREDAI MANGALORE

Discover Mangalore's First Beach-Facing Towers

ULTIMATE ADDRESS BY THE OCEAN

INTRODUCING ROHAN MARINA ONE

NEAR NITK, SURATHKAL, MANGALORE

| EVERY HOME FACES THE OCEAN | TWO ELEGANT TOWERS RISING 39 & 47 FLOORS | 2, 3 & 4 BHK APARTMENTS FROM 2,125 SQ FT |
|---|---|---|




ROHAN CORPORATION, Rohan City, Bejai, Mangalore

+91 98456 07725 | +91 98454 00595

rohanmarinaone.com





KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021